♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

RNI NO.KARKAN/2018/77805
POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 23 | ಭಾನುವಾರ Sunday | 28-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

Connecting hearts in the cultural capital
ASK ಮೈಸೂರು
#askmysuru

ಸುಪ್ರೀಂ ಸೂಚನೆ ಕೊಡುವವರೆಗೂ ರಾಜ್ಯಕ್ಕೆ ಒಂದು ಪೈಸೆ ಕೊಡಲಿಲ್ಲ: ಸಿಎಂ ಕಿಡಿ

■ ಕಾಯಕಯೋಗಿ ಸುದ್ದಿ

ಬಾಗಲಕೋಟೆ (ರಬಕವಿ ಬನಹಟ್ಟಿ): ಈ ಬಾರಿ ನೀವು ಬಿಜೆಪಿಯ ಗದ್ದಿಗೌಡರನ್ನು ಸೋಲಿಸಲೇ ಬೇಕು. ಕಾಂಗ್ರೆಸ್ಸಿನ ಸಂಯುಕ್ತ ಪಾಟೀಲ್ ಪಾರ್ಲಿಮೆಂಟಿನಲ್ಲಿ ನಿಮ್ಮ ಧ್ವನಿ ಆಗಿರ್ತಾರೆ. ಆದ್ದರಿಂದ ಗೆಲ್ಲಿಸಿ ಕಳಿಯಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಾಗಲಕೋಟೆ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸಂಯುಕ್ತ ಪಾಟೀಲ್ ಅವರ ಗೆಲುವಿನ ಸಂದೇಶ ನೀಡಲು ಆಯೋಜಿಸಿದ್ದ ಪ್ರಜಾಧ್ವನಿ–2 ಜನ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ಗದ್ದಿಗೌಡರೇ ಇಷ್ಟು ವರ್ಷ ನೀವು ಪಾರ್ಲಿಮೆಂಟಿನಲ್ಲಿ ರಾಜ್ಯದ ಪರವಾಗಿ ಬಾಯಿಯನ್ನೇ ಬಿಟ್ಟಿಲ್ಲ. ರಾಜ್ಯಕ್ಕೆ ಬರ ಬಂದಾಗಲೂ ಬಾಯಿ ಬಿಡಲಿಲ್ಲ. ಪ್ರವಾಹ ಬಂದಾಗಲೂ ಬಾಯಿ ಬಿಡಲಿಲ್ಲ. ಬಾಗಲಕೋಟೆ ಜಿಲ್ಲೆಯ ಜನರ ಪರವಾಗಿ, ಜಿಲಾಗಲೆಯ ಅಭಿವೃದ್ಧಿ ಪರವಾಗಿಯೂ ಬಾಯಿ ಬಿಡಲಿಲ್ಲ. ಇದು ನಿಮಗೆ ಬಿದ್ದ ಓಟಿಗೆ ನೀವು ಮಾಡಿದ ಅವಮಾನ ಅಲ್ಲವೇ ಎಂದು ಸಂಸದ ಗದ್ದಿಗೌಡರನ್ನು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

20 ವರ್ಷ ನಿಮ್ಮ ಪರವಾಗಿ ಒಂದೂ ಮಾತಾಡದ ಗದ್ದಿಗೌಡರನ್ನು ಮನೆಗೆ ಕಳುಹಿಸಿ. ಅವರು ಸ್ವಲ್ಪ ವಿಶ್ರಾಂತಿ ಪಡೆಯಲಿ. ಈ ಬಾರಿ ಸಂಯುಕ್ತ ಪಾಟೀಲ್ ಅವರನ್ನು ಗೆಲ್ಲಿಸಿ ಕೊಡಿ ಬನ್ನಿ ಸಂಯುಕ್ತ ಪಾರ್ಲಿಮೆಂಟಿನಲ್ಲಿ ಬಾಗಲಕೋಟೆ ಜನರ ಧ್ವನಿ ಆಗಿರ್ತಾರೆ, ರಾಜ್ಯದ ಜನರ ಧ್ವನಿ ಆಗಿರ್ತಾರೆ ಎಂದರು.

ಮೋದಿಯವರ ಸುಳ್ಳಿನ ಮಾಲೆ : ರಾಜ್ಯಕ್ಕೆ ಭೀಕರ ಬಿಸಿಲು ಬರಗಾಲ ಬಂದಿದೆ. ರಾಜ್ಯದ ಪಾಲಿನ ಬರ ಪರಿಹಾರ ಕೊಡಿ ಕೊಡಿ ಅಂತ ಕೇಳಿ ಕೇಳಿ ಸಾಕಾಯ್ತು. ದೆಹಲಿಗೆ ಬಂದು ಪ್ರತಿಭಟನೆ ಮಾಡಿದ್ವಿ. ಆದ್ರೂ ರಾಜ್ಯದ ಪಾಲಿನ ಹಣ ಕೊಡಲಿಲ್ಲ. ನಾವು ಕಾನೂನು



ಹೋರಾಟ ಶುರು ಮಾಡಿ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆವು. ಸುಪ್ರೀಂಕೋರ್ಟ್ ಸ್ಪಷ್ಟ ಸೂಚನೆ ಕೊಡುವವರೆಗೂ ಏಕೆ ರಾಜ್ಯಕ್ಕೆ ಒಂದು ಪೈಸೆಯನ್ನೂ ಕೊಡಲಿಲ್ಲ ಮೋದಿಯವರೇ. ಇಂಥಾ ದ್ರೋಹ ಏಕೆ ಮಾಡ್ತಿದ್ರಿ ಎಂದು ಪ್ರಶ್ನಿಸಿದರು.

ಭಾಷಣದ ಇತರೆ ಹೈಲೈಟ್ಸ್: ಮೋದಿಯವರೇ ರೈತರ ಆದಾಯ ದುಪ್ಪಟ್ಟು ಮಾಡ್ತೀವಿ ಅಂದ್ರಿ. ಪ್ರತಿಭಟನೆ ಮಾಡಿ ನೂರಾರು ರೈತರು ಮೃತಪಟ್ಟರೂ ಈ ರೈತರ ಸಾವಿನ ಬಗ್ಗೆ ನಿಮಗೆ ಸಣ್ಣ ಕರುಣೆಯೂ ಬರಲಿಲ್ಲ . ಮೋದಿಯವರೇ, ಡಾಲರ್ ಎದುರು ರೂಪಾಯಿ ಮೌಲ್ಯ ಕಡಿಮೆ ಮಾಡ್ತೀವಿ ಅಂದ್ರಿ, ಆದರೆ ಈಗ ಡಾಲರ್ ಎದುರು ರೂಪಾಯಿ ಮೌಲ್ಯ ಯಾವ ಮಟ್ಟಕ್ಕೆ ಏರಿಕೆ ಆಗಿದೆ ನೋಡಿ

ಮೋದಿಯವರೇ ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀವಿ ಅಂದ್ರಿ, ಕೆಲಸ ಕೇಳಿದ್ರೆ ಪಕೋಡ ಮಾರಾಟ ಮಾಡಿ ಅಂದ್ರಿ

ಮೋದಿಯವರೇ, ಬೆಲೆ ಏರಿಕೆಗೆ ಬ್ರೇಕ್ ಹಾಕ್ತೀವಿ ಅಂತ ಭಾರತೀಯರನ್ನು ನಂಬಿಸಿ ಬಕ್ರಾ ಮಾಡಿದ್ರಿ. ಡೀಸೆಲ್, ಪೆಟ್ರೋಲ್, ಗೊಬ್ಬರ, ಗ್ಯಾಸ್ ಬೆಲೆ ಗಗನಕ್ಕೆ ಏರಿಸಿದ್ದಲ್ಲಾ ಸ್ವಾಮಿ. ಇಂಥಾ ನಂಬಿಕೆ ದ್ರೋಹನಾ ಸ್ವಾಮಿ ಮಾಡೋದು? ಮೋದಿಯವರೇ, ನಾವು ದುಡ್ಡು ಕೊಡ್ತಿವಿ ಅಂದ್ರೂ ರಾಜ್ಯದ ಜನರಿಗೆ ಅಕ್ಕಿ ಕೊಡಲಿಲ್ಲವಲ್ಲಾ? ಇದು ನನ್ನ ಜನರ ಹೊಟ್ಟೆ ಮೇಲೆ ಹೊಡೆದ ಹಾಗಲ್ವಾ ಮಿಸ್ಟರ್ ಮೋದಿ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಇಡೀ ದೇಶದ ರೈತರ ಸಾಲ ಮನ್ನಾ ಆಗ್ತದೆ

ಪ್ರತಿ ಕುಟುಂಬದ ಮಹಿಳೆಗೆ ವರ್ಷಕ್ಕೆ ಒಂದೂ ಕಾಲು ಲಕ್ಷ ರೂಪಾಯಿ ಅಕೌಂಟಿಗೆ ಬಂದು ಬೀಳ್ತೈ. ನಿರುದ್ಯೋಗಿ ಯುವಕರಿಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ಕೊಡ್ತೀವಿ ಸ್ವಾಮಿನಾಥನ್ ವರದಿಯಂತೆ ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಖಚಿತ

ಈ ರೀತಿಯ 25 ಗ್ಯಾರಂಟಿಗಳು ಜಾರಿಯಾಗಲಿದ್ದು ಈ ಗ್ಯಾರಂಟಿ ಪತ್ರಕ್ಕೆ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿಯವರು ಸಹಿ ಹಾಕಿದ್ದಾರೆ ಎಲ್ಲಾ ಗ್ಯಾರಂಟಿಗಳ ಲಕ್ಷ ಹಣ ಬ್ರೋಕರ್ ಗಳ ಹಾವಳಿ ಇಲ್ಲದೆ ನಿಮ್ಮ ಖಾತೆಗೆ ನೇರವಾಗಿ ಬಂದು ಬೀಳುತ್ತದೆ

ನೇಕಾರರಿಗೆ ಸಾಲ ಮನ್ನಾ ಮಾಡಿದೆ, ಮಗ್ಗಗಳಿಗೆ ಉಚಿತ ವಿದ್ಯುತ್ ಕೊಟ್ಟೆ ಇನ್ನೂ ಹಲವು ಅನುಕೂಲ ನೇಕಾರರಿಗೆ ಮಾಡಿದ್ದು ನಾವೇ. ಬಿಜೆಪಿಯವರು ಏನೇನೂ ಮಾಡಲಿಲ್ಲ ನಾವು ಕೆಲಸ ಮಾಡಿದ್ದೇವೆ. ನಮಗೆ ಕೂಲಿ ಕೊಡಿ. ದಯಮಾಡಿ ಸಂಯುಕ್ತ ಪಾಟೀಲ್ ಗೆಲ್ಲಿಸಿ. ಇವರು ನಿಮ್ಮ ಧ್ವನಿಯಾಗಿ ದೆಹಲಿಯಲ್ಲಿ ಘರ್ಜಿಸುತ್ತಾರೆ

ಸಚಿವರಾದ ತಿಮ್ಮಾಪುರ್, ಶಿವಾನಂದ ಪಾಟೀಲ್, ಮಾಜಿ ಅಚ್ಚಿವರಾದ ಲಕ್ಷ್ಮಣ ಸವದಿ, ವಿನಯ್ ಕುಲಕರ್ಣಿ, ಎಸ್.ಆರ್.ಪಾಟೀಲ್, ಶಾಸಕರುಗಳಾದ ಉಮಾಶ್ರೀ, ವಿಜಯಾನಂದ ಕಾಶಪ್ಪನವರ್, ಜೆ.ಟಿ.ಪಾಟೀಲ್, ಸುನಿತ ಪಾಟೀಲ್, ಅಜಯ್ ಕುಮಾರ್ ಸರ್ ನಾಯಕ, ರಾಜು ಚಿಮ್ಮನಕಟ್ಟಿ ಬಿ.ಆರ್.ಯಾವಗಲ್, ಜಿಲ್ಲಾ ಮುಖಂಡರುಗಳಾದ ಸುಣಗಾರ, ಕೊಣ್ಣೂರ, ಅಥಣಿ ಉಸ್ತುವಾರಿ ಸಚಿವರ್, ಸಂಜಯ್ಯನ ಮಠ್, ಆನಂದ ನ್ಯಾಮಗೌಡ ಸೇರಿ ಹಲವು ಮುಖಂಡರು ಉಪಸ್ಥಿತರಿದ್ದರು.

ಚುಟುಕು ಸುದ್ದಿ

ಬರ ಪರಿಹಾರದ ಹಣ ಲೂಟಿ ಹೊಡೆಯಲು ಬಿಡಲ್ಲ, ಕಾವಲು ಕಾಯುತ್ತೇವೆ: ಆರ್ ಅಶೋಕ್

ಬೆಂಗಳೂರು: ಕೇಂದ್ರದ ಬರ ಪರಿಹಾರ ಲೂಟಿ ಹೊಡೆಯಲು ನಾವು ಬಿಡಲ್ಲ. ಈ ಹಣವನ್ನು ನಾವು ಕಾವಲು ಕಾಯುತ್ತೇವೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹೇಳಿದ್ದಾರೆ. ಲೂಟಿಕೋರರ ಪಕ್ಷ ಕಾಂಗ್ರೆಸ್ 50 ವರ್ಷ ಆಡಳಿತ ಮಾಡಿದೆ. ಯಾವಾಗ ಯಾವಾಗ ಕರ್ನಾಟಕ ಹಣ ಕೇಳಿದೆ? ಎಷ್ಟು ಬಿಡುಗಡೆ ಮಾಡಿದೆ? ಹೇಳಲಿ. ಅನುದಾನ ತಾರತಮ್ಯ ಮಾಡಿದ್ದರೆ ನಾವೇ ಬಂದು ಕ್ಷಮಾಪಣೆ ಕೇಳುತ್ತೇವೆ. ಇಲ್ಲ ಅಂದರೆ ಅವರು ಕ್ಷಮಾಪಣೆ ಕೇಳಲಿ ಎಂದು ಕಿಡಿಕಾರಿದ್ದಾರೆ. ಯಾರು ಜಾಸ್ತಿ ಬಿಡುಗಡೆ ಮಾಡಿದಾರೆ ಜನ ತೀರ್ಮಾನ ಮಾಡಲಿ. ಯಾವುದೇ ಕಾರಣಕ್ಕೂ ಹಣ, ಚೆಕ್ ಮೂಲಕ ಬರದ ಹಣ ಬಿಡುಗಡೆ ಮಾಡಬಾರದು. ಡಿಬಿಟಿ ಮೂಲಕವೇ ವರ್ಗಾಯಿಸಬೇಕು. ಜಾಸ್ತಿ ಬರ ಪರಿಹಾರ ಬಂದರೆ ಜಾಸ್ತಿ ಲೂಟಿ ಹೊಡೆಯಬಹುದು ಅಂತ ಕೇಳುತ್ತಿದ್ದಾರೆ ಎಂದು ಹೇಳಿದ್ದಾರೆ.

ಇವಿಎಂ ಮೆಷಿನ್ ಸಾಗಿಸುತ್ತಿದ್ದ ವಾಹನದ ಟೈರ್ ಬ್ಲಾಸ್ಟ್

ಕೋಲಾರ: ಇವಿಎಂ ಮೆಷಿನ್ ಸಾಗಿಸುತ್ತಿದ್ದ ಕ್ಯಾಂಟರ್ ವಾಹನದ ಟೈರ್ ಬ್ಲಾಸ್ಟ್, ಆದ ಘಟನೆ ಕೋಲಾರದಲ್ಲಿ ನಡೆದಿದೆ. ಮಳಬಾಗಿಲಿನಿಂದ ಕೋಲಾರದ ಸ್ಟ್ರಾಂಗ್ ರೂಂಗೆ ಇವಿಎಂ ಸಾಗಿಸಲಾಗುತ್ತಿತ್ತು. ಈ ವೇಳೆ ವಡಗೂರ್ ಗೇಟ್ ಬಳಿ ಟೈರ್ ಬ್ಲಾಸ್ಟ್ ಆಗಿದೆ. ಪರಿಣಾಮ ಸುಮಾರು 1 ಗಂಟೆಗೆಳ ಕಾಲ ವಾಹನ ರಸ್ತೆಯಲ್ಲಿಯೇ ನಿಲ್ಲುವಂತಾಗಿದೆ.

ನನ್ನ ಕ್ಷೇತ್ರದ ಚುನಾವಣೆಯ ಬಗ್ಗೆ ನಾನು ಯೋಚನೆಯೇ ಮಾಡಿಲ್ಲ : ಎಚ್.ಡಿ.ಕುಮಾರಸ್ವಾಮಿ

■ ಕಾಯಕಯೋಗಿ ಸುದ್ದಿ

ಭಾರತೀನಗರ: ನನ್ನ ಕ್ಷೇತ್ರದ ಚುನಾವಣೆಯ ಬಗ್ಗೆ ನಾನು ಯೋಚನೆಯೇ ಮಾಡಿಲ್ಲ, ಏಕೆಂದರೆ ನನ್ನ ಚುನಾವಣೆಯನ್ನು ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ನೋಡಿಕೊಳ್ಳುತ್ತಾರೆಂದು ನಂಬಿಕೆ ನಿಗಿತ್ತು ಎಂದು ಎನ್‌ಡಿಎ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಕೆ.ಎಂ.ದೊಡ್ಡಿಯ ಸಂತೋಷ್‌ತಮ್ಮಣ್ಣ ಅವರ ನಿವಾಸದಲ್ಲಿ ಉಪಹಾರ ಸೇವಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಮಂಡ್ಯಜಿಲ್ಲೆಯಲ್ಲಿ ಚುನಾವಣೆಯ ಬಗ್ಗೆ ಗಮನಕೊಟ್ಟಿಲ್ಲ. ನನ್ನ ಕ್ಷೇತ್ರದ ಚುನಾವಣೆಯನ್ನು ಜನರೇ ತೀರ್ಮಾನಿಸುತ್ತಾರೆಂಬ ನಂಬಿಕೆ ನನ್ನಲ್ಲಿದೆ. ಹಾಗಾಗಿ 12 ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರವನ್ನು ನಾನು ಕೈಗೊಂಡಿದ್ದೆ ಎಂದರು.

ಕಾಂಗ್ರೆಸ್‌ನವರು ಎಷ್ಟೇ ಅಪಪ್ರಚಾರ ಮತ್ತು ಮತದಾರರಿಗೆ ಆಮಿಷವೊಡ್ಡಿದರೂ ಸಹ ಅದನ್ನು ಲೆಕ್ಕಿಸದೆ ಯೋಗ್ಯರಿಗೆ ಮತ ನೀಡಿದ್ದಾರೆಂಬ ನಂಬಿಕೆ ನನಗಿದೆ ಎಂದರು.

ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ



ಉಳಿಗಾಲ ಇಲ್ಲ ಎಂಬ ಭೀತಿಯಿಂದ ಗ್ಯಾರಂಟಿ ಗಳನ್ನು ನೀಡುತ್ತಾ ಜನರನ್ನು ದಿಕ್ಕುತಪ್ಪಿಸುತ್ತಿದ್ದಾರೆ. ಈಗಾಗಲೇ ರಾಜ್ಯದ ಅಭಿವೃದ್ಧಿ ಕುಂಠಿತಗೊಂಡಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜೆಡಿಎಸ್‌ನ ಮೂರು ಅಭ್ಯರ್ಥಿಗಳು ಗೆಲ್ಲಲ್ಲಿದ್ದಾರೆ. ಬೆಂಗಳೂರು ಗ್ರಾಮಾಂತರದಲ್ಲಿ ಕಳೆದ ಭಾರಿಗಿಂತಲೂ ಈ ಭಾರಿ ಉತ್ತಮ ಮತದಾನವಾಗಿದೆ. ಇದರಿಂದ ಬಿಜೆಪಿ ಅಭ್ಯರ್ಥಿ ಮಂಜುನಾಥ್ ಅವರು ಗೆಲ್ಲಲ್ಲಿದ್ದಾರೆ. ಕಾಂಗ್ರೆಸ್ ನಾಯಕರು ಇದರಿಂದ ಈಗಾಲೇ ಆತಂಕರಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಿ.ಸಿ.ತಮ್ಮಣ್ಣ, ಪುತ್ರ ಸಂತೋಷ್‌ತಮ್ಮಣ್ಣ, ಕವಿತಾಸಂತೋಷ್, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಹೊಸ್ಕೋಟೆ, ಮನ್ಮುಲ್ ನಿರ್ದೇಶಕ ಎಸ್.ಪಿ.ಸ್ವಾಮಿ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಮಾದನಾಯಕನಹಳ್ಳಿ ರಾಜಣ್ಣ ಸೇರಿದಂತೆ ಹಲವರಿದ್ದರು.

ರಾಜ್ಯದ ಮೊದಲ ಹಂತದ ಮತದಾನ: 2,172 ಪ್ರಕರಣ ದಾಖಲು

■ ಕಾಯಕಯೋಗಿ ಸುದ್ದಿ

ಬೆಂಗಳೂರು: ರಾಜ್ಯದ 14 ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಶುಕ್ರವಾರ ಮತದಾನ ನಡೆಯಿತು.

ಮೊದಲ ಹಂತದ ಚುನಾವಣೆ ಸಂದರ್ಭದಲ್ಲಿ ಎಸ್?ಎಸ್?ಟಿ ಮತ್ತು ಪೊಲೀಸ್? ಇಲಾಖೆ ರಾಜ್ಯದಲ್ಲಿ ಅಕ್ರಮವಾಗಿ ಸಂಗ್ರಹಿಸಿದ್ದ ಹಣ, ಮದ್ಯ, ಡ್ರಗ್ಸ್, ಚಿನ್ನಾಭರಣ ಮತ್ತು ಉಚಿತ ಉಡುಗೊರೆಗಳನ್ನು ಜಪ್ತಿ ಮಾಡಿದ್ದು, ಈ ಸಂಬಂಧ 2,172 ಪ್ರಕರಣಗಳು ದಾಖಲಾಗಿವೆ. ಅಬಕಾರಿ ಇಲಾಖೆ 3098 ಹೀನಸ್ ಪ್ರಕರಣಗಳನ್ನು ದಾಖಲಿಸಿದೆ. ಲೈಸೆನ್ಸ್ ಉಲ್ಲಂಘನೆ ಮಾಡಿದ್ದಕ್ಕೆ 4789 ಪ್ರಕರಣ. ಎನ್?ಡಿಪಿಎಸ್? ಕಾಯ್ದೆ ಅಡಿ 177, ಸೆಕ್ಷನ್ 15ರಡಿ 28,299 ಪ್ರಕರಣಗಳು ದಾಖಲಾಗಿವೆ. ಅಧಿಕಾರಿಗಳು ಒಟ್ಟು 1,916 ವಾಹನಗಳನ್ನು ಜಪ್ತಿ ಮಾಡಲಾಗಿದೆ.

ಇನ್ನು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಯಲಹಂಕದ ಮಾದನಾಯನಹಳ್ಳಿ ಬಳಿ 4.80 ಕೋಟಿ ರೂಪಾಯಿ ಜಪ್ತಿ ಮಾಡಿದ್ದಾರೆ.

ಹಾಸನದಲ್ಲಿ ಎರಡು ಗುಂಪುಗಳ ನಡುವೆ ಮಾರಾಮಾರಿ| ಕಾರ್ಯಕರ್ತರು ಆಸ್ಪತ್ರೆಗೆ ದಾಖಲು

■ ಕಾಯಕಯೋಗಿ ಸುದ್ದಿ

ಹಾಸನದಲ್ಲಿ ಮತದಾನ ಪ್ರಕ್ರಿಯೆ ಮುಗಿಯುವ ವೇಳೆ ಎರಡು ಗುಂಪುಗಳ ನಡುವೆ ಮಾರಾಮಾರಿ ನಡೆದಿದೆ. ಇದರಲ್ಲಿ ಕಾಂಗ್ರೆಸ್ ಕಾರ್ಯಕರ್ತ ಗಂಭೀರವಾಗಿ ಗಾಯಗೊಂಡಿರುವ ಘಟನೆ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಕೆ.ಬಿ.ಪಾಳ್ಯದಲ್ಲಿ ನಡೆದಿದೆ.

ಕೆ.ಬಿ.ಪಾಳ್ಯದ ಮತಗಟ್ಟೆ ಸಂಖ್ಯೆ 249ರ ಬಳಿ ಕಾಂಗ್ರೆಸ್‌ನ ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ಘರ್ಷಣೆ ನಡೆದಿದ್ದು, ಗಂಭೀರವಾಗಿ ಗಾಯಗೊಂಡ ಕೈ ಕಾರ್ಯಕರ್ತನನ್ನು ಹಾಸನದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮತಗಟ್ಟೆಗೆ ಹಾಸನ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ಅವರ ತಾಯಿ ಅನುಪಮಾ ಮಹೇಶ್ ಭೇಟಿ ನೀಡಿದ್ದರು. ಈ ವೇಳೆ ಜೆಡಿಎಸ್ ಪಕ್ಷದ ಪರ ದಳ ಕಾರ್ಯಕರ್ತರು ಜೈಕಾರ ಕೂಗಿದ್ದಾರೆ. ಇದರಿಂದ ಕಾಂಗ್ರೆಸ್ ಕಾರ್ಯಕರ್ತರು ರೊಚ್ಚಿಗೆದ್ದಿದ್ದಾರೆ. ಇದು ವಿಕೋಪಕ್ಕೆ ತಿರುಗಿ ಎರಡು ಪಕ್ಷದವರ ನಡುವೆ ಮಾರಾಮಾರಿ ನಡೆದಿದೆ. ಜೆಡಿಎಸ್ ಕಾರ್ಯಕರ್ತರಾದ ಸಾಗರ್ ಹಾಗೂ ಪ್ರದೀಪ್ ಎಂಬುವವರು ಕಬ್ಬಿಣದ ರಾಡ್‌ನಿಂದ ಕಾಂಗ್ರೆಸ್ ಕಾರ್ಯಕರ್ತರಾದ ಮೋಹನ್‌ಕುಮಾರ್, ಗಿರೀಶ್, ಮಂಜುನಾಥ್ ಮೇಲೆ ಹಲ್ಲೆ ನಡೆಸಿದ್ದಾರೆ ಎಂಬ ಆರೋಪ ಕೇಳಬಂದಿದೆ. ಗಂಭೀರವಾಗಿ ಗಾಯಗೊಂಡಿರುವ ಕಾಂಗ್ರೆಸ್ ಕಾರ್ಯಕರ್ತ ಮೋಹನ್‌ಕುಮಾರ್ ಅವರನ್ನು ಹಾಸನದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನು ಕಾಂಗ್ರೆಸ್ ಕಾರ್ಯಕರ್ತರಿಂದಲೂ ಜೆಡಿಎಸ್ ಕಾರ್ಯಕರ್ತರ ಮೇಲೂ ಹಲ್ಲೆ ನಡೆದಿದೆ ಎಂದ ಆರೋಪ ಕೇಳಿಬಂದಿದೆ.

ಜೆಡಿಎಸ್‌ನ ಪ್ರದೀಪ್, ಸಾಗರ್ ಹಾಗೂ ಗೌತಮ್ ಮೇಲೆ ಕಾಂಗ್ರೆಸ್ ಕಾರ್ಯಕರ್ತರು ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ. ಗಾಯಗೊಂಡ ಜೆಡಿಎಸ್ ಕಾರ್ಯಕರ್ತನ್ನು ಹಾಸನದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಹಾಸನದಲ್ಲಿ ಪ್ರಜ್ವಲ್‌ನನ್ನು ಕಣದಿಂದ ಕೆಳಗಿಳಿಸಬೇಕು: ಡಿಕೆ ಸುರೇಶ್

ಬೆಂಗಳೂರು:ಹಾಸನ ಜಿಲ್ಲೆಯಲ್ಲಿ ನಡೆದಿರುವ ಘಟನೆ ನಾಚಿಕೆಗೇಡಿನ ಘಟನೆಯಾಗಿದ್ದು, ಈ ಬಗ್ಗೆ ಕುಮಾರ ಸ್ವಾಮಿ ಮಾತನಾಡಲಿ. ಹೆಣ್ಣುಮಕ್ಕಳು, ತಾಯಂದಿರು, ಸಹೋದರಿಯರು, ಇಡೀ ಸಮಾಜಕ್ಕೆ ಕಳಂಕ ತರುವ ಕೆಲಸ ಇದಾಗಿದೆ. ನಿಜವಾಗಲೂ ಕರ್ನಾಟಕ, ಕನ್ನಡಿರ ಬಗ್ಗೆ ಗೌರವ ಇರುವುದಾದರೆ ಹಾಸನದಲ್ಲಿ ಅವರನ್ನು ಕಣದಿಂದ ಕೆಳಗಿಸಬೇಕೆಂದು ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಅಭ್ಯರ್ಥಿ ಡಿ.ಕೆ.ಸುರೇಶ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಹಾಸನದ ಘಟನೆಯ ವಿಚಾರಗಳನ್ನು ಈಗಾಗಲೇ ನಾವು ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ಎಳ್ಳಕ್ಕೆ ಮಾಡಿದ್ದೇವೆ. ಇದು ಅವರ ಕುಟುಂಬಕ್ಕೆ ನಾಚಿಕೆ ಆಗುವ ವಿಚಾರವಾಗಿದೆ. ಸುಮ್ಮನೆ ದಾರಿ ತಪ್ಪಿಸುವುದನ್ನು ಬಿಟ್ಟು ಹಾಗೂ ಕರ್ನಾಟಕ, ಕನ್ನಡದ ಹೆಣ್ಣುಮಕ್ಕಳ ಬಗ್ಗೆ ಗೌರವ ಇರೋದೇ ಆದರೆ ಮೊದಲು ಕಣದಿಂದ ಹಿಂದೆ ಸರಿಯಲು ಹೇಳಬೇಕು ಅವರಿಗೆ. ಬೇರೆಯವರ ಮೇಲೆ ಆರೋಪ ಮಾಡೋದು ಅಷ್ಟೇ ಅಲ್ಲ ಮುಖ್ಯ. ನಮ್ಮ ನುಡಿ, ನಡೆ ಕೂಡ ಮುಖ್ಯ ಆಗುತ್ತದೆ ಎಂದು ವಾಗ್ಬಾಳಿ ನಡೆಸಿದ್ದಾರೆ.

ಚಿಂಪುಗಾನಹಳ್ಳಿಯಲ್ಲಿ ವಿದ್ಯುತ್ ಸ್ಪರ್ಶ:10 ಗುಡಿಸಲು ಭಸ್ಮ
ಮನೆಯಲ್ಲಿದ್ದ ಹಣ ಸೇರಿ 30 ಲಕ್ಷಕ್ಕೂ ಅಧಿಕ ವಸ್ತುಗಳು ಬೆಂಕಿಯ ಕೆನ್ನಾಲಿಗೆಗೆ ಸುಟ್ಟು ಕರಕಲು

■ ಕಾಯಕಯೋಗಿ ಸುದ್ದಿ

ಕೊರಟಗೆರೆ : ಆಕಸ್ಮಿಕ ಬೆಂಕಿ ತಗಲಿ 10 ಗುಡಿಸಲು ಭಸ್ಮವಾಗಿ ಮನೆಯಲ್ಲಿದ್ದ ದವಸ ಧಾನ್ಯ ಸಂಪೂರ್ಣ ನಾಶವಾಗಿರುವ ಘಟನೆ ಚಿಂಪುಗಾನಹಳ್ಳಿ ಗ್ರಾಮದಲದಲ್ಲಿ ಶುಕ್ರವಾರ ಮಧ್ಯಾಹ್ನ ನಡೆದಿದೆ.

ತಾಲೂಕಿನ ಹೊಳವನಹಳ್ಳಿ ಹೋಬಳಿಯ ಕ್ಯಾಮೇನಹಳ್ಳಿ ಗ್ರಾಪಂ ವ್ಯಾಪ್ತಿಯ ಚಿಂಪುಗಾನಹಳ್ಳಿ ಗ್ರಾಮದ ಹೊರವಲಯದಲ್ಲಿದ್ದ 30 ಗುಡಿಸಲುಗಳಲ್ಲಿ 10 ಗುಡಿಸಲುಗಳಿಗೆ ಬೆಂಕಿ ತಗುಲಿ ಸುಟ್ಟು ಭಸ್ಮವಾಗಿದೆ. ಗುಡಿಸಲು

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 28-04-2024

ಮಂಡ್ಯ

ಶಾಸಕ ಪ್ರಿಯಕೃಷ್ಣ ಹುಟ್ಟುಹಬ್ಬ: ವೃದ್ಧಾಶ್ರಮದ ನಿವಾಸಿಗಳಿಗೆ ಊಟ, ಹಣ್ಣು ವಿತರಣೆ

ಮಂಡ್ಯ : ನಗರಸಭಾ ಮಾಜಿ ಸದಸ್ಯ ಡಿ.ಮಂಜುನಾಥ್ ನೇತೃತ್ವದಲ್ಲಿ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರಿಯಕೃಷ್ಣ ಅವರ ಹುಟ್ಟುಹಬ್ಬದ ಪ್ರಯುಕ್ತ ಮಂಡ್ಯ ನಗರದ ವಿಕಸನ ಜೋಗುಳ ಕೇಂದ್ರದ ಮಕ್ಕಳಿಗೆ ಮತ್ತು ಸೇವಾಕಿರಣ ವೃದ್ಧಾಶ್ರಮದ ನಿವಾಸಿಗಳಿಗೆ ಊಟ ಮತ್ತು ಹಣ್ಣುಗಳನ್ನು ವಿತರಣೆ ಮಾಡಲಾಯಿತು.

ಶಾಸಕ ಪ್ರಿಯಕೃಷ್ಣ ಅವರ ಅಭಿಮಾನಿಗಳು ಶನಿವಾರ ವಿಕಸನ ಜೋಗುಳ ಕೇಂದ್ರಕ್ಕೆ ತೆರಳಿ, ಮಕ್ಕಳೊಂದಿಗೆ ಕೇಕ್ ಕತ್ತರಿಸಿ ಪರಸ್ಪರ ಸಿಹಿ ಹಂಚಿ ನಂತರ ಸೇವಕಿರಣ ವೃದ್ಧಾಶ್ರಮದ ನಿವಾಸಿಗಳಿಗೆ ಊಟ ಮತ್ತು ಹಣ್ಣುಗಳನ್ನು ವಿತರಣೆ ಮಾಡಿ ಶುಭಕೋರಿದರು. ಡಿ.ಮಂಜುನಾಥ್ ಮಾತನಾಡಿದ ಜನಪ್ರಿಯ ಶಾಸಕ ಪ್ರಿಯಾ ಕೃಷ್ಣ ಅವರು ಸಮಾಜಮುಖಿ ಕೆಲಸಗಳನ್ನು ಮಾಡುತ್ತಿದ್ದು, ಅವರಿಗೆ ರಾಜಕಾರಣದಲ್ಲಿ ಉತ್ತಮ ಹುದ್ದೆ ದೊರಕಲಿ, ದೇವರು ಅವರಿಗೆ ಆಯಸ್ಸು, ಆರೋಗ್ಯ ಭಾಗ್ಯ ನೀಡಲಿ ಎಂದು ಶುಭ ಹಾರೈಸಿದರು. ವೆಂಕಟೇಶ್ ಮಾತನಾಡಿ, ಪ್ರಿಯಕೃಷ್ಣ ಅವರು ಯುವ ರಾಜಕಾರಣಿಗಳಿಗಿಂತ ಉತ್ತಮ ಕೆಲಸ ಮಾಡುತ್ತಿದ್ದು ದೇವರು ಅವರಿಗೆ ಆಯುರಾರೋಗ್ಯ ಭಾಗ್ಯ ನೀಡಲಿ ಎಂದು ಶುಭ ಹಾರೈಸಿದರು. ಎಜಯ್, ಅಜಯ್‌ಗೌಡ, ರಾಘವೇಂದ್ರ, ಮಹೇಶ್, ಚಿಂದ್ರಶೇಖರ್, ಸಂದೀಪ್, ಸುನಿಲ್, ಕಾರ್ತಿಕ್ ಹಾಜರಿದ್ದರು.



18 ಸ್ಟ್ರಾಂಗ್ ರೂಂಗಳಲ್ಲಿ ಮತಯಂತ್ರಗಳು ಭದ್ರ: ಪೊಲೀಸ್ ಸರ್ಪಗಾವಲು

ಮಂಡ್ಯ : ಮಂಡ್ಯ ಲೋಕಸಭಾ ಕ್ಷೇತ್ರದ ಚುನಾವಣೆಯು ಸಣ್ಣಪುಟ್ಟ ಘಟನೆಗಳನ್ನು ಹೊರತುಪಡಿಸಿದರೆ ಬಹುತೇಕ ಶಾಂತಿಯುತವಾಗಿ ನಡೆದಿದ್ದು, ಇದರ ಬೆನ್ನಲ್ಲೇ ಕ್ಷೇತ್ರದ ಎಲ್ಲಾ ಮತಗಟ್ಟೆಗಳ ಮತಯಂತ್ರಗಳು ಮಂಡ್ಯ ಜಿಲ್ಲಾ ಕೇಂದ್ರದ ಸರ್ಕಾರಿ ವಾಣಿಜ್ಯೋದ್ಯಮ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಭದ್ರತಾ ಕೊಠಡಿಗಳನ್ನು ಸೇರಿವೆ. ಮತಯಂತ್ರಗಳನ್ನಿಟ್ಟಿರುವ ಕೊಠಡಿಗಳು ಸೇರಿದಂತೆ ಇಡೀ ಕಾಲೇಜಿಗೆ ಬಿಗಿ ಬಂದೋಬಸ್ತ್ ಹಾಕಾಗಿದೆ.

ಮತದಾನ ಮುಗಿಯುತ್ತಿದ್ದಂತೆ ಆಯಾಯ ವಿಧಾನಸಭಾ ಕ್ಷೇತ್ರಗಳಲ್ಲಿ ಡಿ.ಮಸ್ಟರಿಂಗ್ ಸೆಂಟರ್‌ಗಳಲ್ಲಿ ಡಿ-ಮಸ್ಟರಿಂಗ್ ಕಾರ್ಯ ನಡೆಸಿ ಮತದಾನಕ್ಕೆ ಬಳಸಿದ ಎಲ್ಲಾ ವಿದ್ಯುನ್ಮಾನ ಮತಂತ್ರಗಳು, ಬ್ಯಾಲೆಟ್ ಯೂನಿಟ್, ಕಂಟ್ರೋಲ್ ಯೂನಿಟ್, ವಿವಿಪ್ಯಾಟ್ ಹಾಗೂ ಎಲ್ಲಾ ಶಾಸನಬದ್ಧ ದಾಖಲೆಗಳನ್ನು ಜಿಪಿಎಸ್ ಅಳವಡಿಸಿದ ವಾಹನದ ಮೂಲಕ ಸೂಕ್ತ ಪೊಲೀಸ್ ಭದ್ರತೆಯೊಂದಿಗೆ ಮಂಡ್ಯ ಸರ್ಕಾರಿ ಮಹಾವಿದ್ಯಾಲಯದ ಕಾಲೇಜಿಗೆ ರಾತ್ರಿಯೇ ತರಲಾಯಿತು.



ಕೆಲವಡೆ ಅವಧಿ ಮುಗಿದರೂ ಅಷ್ಟರೊಳಗೆ ಸರತಿ ಸಾಲಿನಲ್ಲಿ ನಿಂತಿದ್ದ ಮತದಾರರಿಗೆ ಮತದಾನ ಮಾಡಲು ರಾತ್ರಿ 7.30ರವರೆಗೆ ಅವಕಾಶ ಕಲ್ಪಿಸಲಾಗಿತ್ತು. ಹೀಗಾಗಿ ಅಂತಹ ಮತಗಟ್ಟೆಗಳು ಹಾಗೂ ದೂರದ ಪ್ರದೇಶಗಳಿಂದ ಮತಯಂತ್ರಗಳು ನಗರಕ್ಕೆ ಬರುವುದು ತಡವಾಯಿತು. ರಾತ್ರಿಯಿಡೀ ಮತಯಂತ್ರಗಳ ವಾಹನಗಳು ಪೊಲೀಸ್ ಭದ್ರತೆಯಲ್ಲಿ ಬರುತ್ತಲೇ ಇದ್ದವು.

ಶನಿವಾರ ಬೆಳಿಗ್ಗೆ 8 ಗಂಟೆಗೂ ಕೆಳರ್‌ನಗರ ವಿಧಾನಸಭಾ ಕ್ಷೇತ್ರದ ಮತಗಟ್ಟೆಯೊಂದರಿಂದ ಮತಯಂತ್ರ ಬಂದಿದೆ. ಹೀಗಾಗಿ ರಾತ್ರಿಯೇ ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಎನ್.ಯತೀಶ್ ಹಾಗೂ ಎಲ್ಲಾ ಸಹಾಯಕ ಚುನಾವಣಾಧಿಕಾರಿಗಳ ಎಚ್ಚರವಿದ್ದು ಕರ್ತವ್ಯ ನಿರ್ವಹಿಸುವ ಮೂಲಕ ವಿದ್ಯುನ್ಯಾನ ಮತಯಂತ್ರಗಳು ಭದ್ರತಾ ಕೊಠಡಿ ಸೇರುವಂತೆ ಮಾಡಿದರು.

18 ಸ್ಟ್ರಾಂಗ್ ರೂ.ಗಳು

ನಗರದ ಮಂಡ್ಯ ವಿವಿಯ ಕಾಮರ್ಸ್ ಬ್ಲಾಕ್‌ನ 18 ಕೊಠಡಿಗಳಲ್ಲಿ ಸ್ಥಾಪಿಸಿರುವ ಸ್ಟ್ರಾಂಗ್ ರೂ.ಗಳಲ್ಲಿ ಎಲ್ಲಾ ವಿದ್ಯುನ್ಯಾನ ಮತಯಂತ್ರಗಳು ಇಡಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 2ರಂತೆ ಸ್ಟ್ರಾಂಗ್ ರೂಂ.ಗಳನ್ನು ಸ್ಥಾಪಿಸಲಾಗಿದೆ. ಇದಲ್ಲದೆ ಅಂಚೆ ಮತಗಳು ಹಾಗೂ ಶಾಸನಬದ್ಧ ದಾಖಲೆಗಳಿಗಾಗಿ ತಲಾ ಒಂದೊಂದು ಸ್ಟ್ರಾಂಗ್ ರೂ. ತೆರೆಯಲಾಗಿದೆ.

ವಿಧಾನಸಭಾ ಕ್ಷೇತ್ರವಾರುಂಟು ಸ್ಥಾಪಿಸಿರುವ 16 ಭದ್ರತಾ ಕೊಠಡಿಯಲ್ಲಿ ಪ್ರತ್ಯೇಕವಾಗಿ ಎರಡು ಲಾಕ್ ಸಿಸ್ಟಂನಲ್ಲಿ ಸೀಲ್ ಮಾಡಿ ಸುರಕ್ಷಿತವಾಗಿ ಇಡಲಾಗಿದೆ. ಸಿಆರ್‌ಪಿಎಫ್ ಮತ್ತು ಜಿಲ್ಲಾ ಪೊಲೀಸ್ ಸೇರಿದಂತೆ ರಕ್ಷಣಾ ಸಿಬ್ಬಂದಿ ವರ್ಗದವರಿಂದ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ. ಎಲ್ಲಾ ಭದ್ರತಾ ಕೊಠಡಿಗಳ ಹೊರಭಾಗದಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ.

ಭದ್ರತಾ ಕೊಠಡಿ ಸುರಕ್ಷತಾ ವ್ಯವಸ್ಥೆಯನ್ನು ವೀಕ್ಷಿಸಲು ಮತ ಎಣಿಕೆ ದಿನವಾದ ಜೂ.4ರವರೆಗೆ ದಿನದ 24 ಗಂಟೆಗಳ ಕಾಲವೂ ಕಾರ್ಯನಿರ್ವಹಿಸಲು ಮೂರು ಪಾಳಿಯಲ್ಲಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಮತಯಂತ್ರಗಳನ್ನು ಸಂಗ್ರಹ ಮಾಡಿ ಇಟ್ಟಿರುವ ಸರ್ಕಾರಿ ಮಹಾವಿದ್ಯಾಲಯಕ್ಕೆ 24 ಗಂಟೆಗಳ ಭದ್ರತೆ ಒದಗಿಸಲಾಗಿದೆ.

ಸರ್ಕಲ್ ಇನ್ಸ್‌ಪೆಕ್ಟರ್, ಸಬ್‌ಇನ್ಸ್‌ಪೆಕ್ಟರ್‌ಗಳನ್ನು ಮೂರು ಪಾಳಿಯಲ್ಲಿ ಭದ್ರತೆ ಮೇಲ್ವಿಚಾರಣೆಗೆ ನಿಯೋಜನೆ ಮಾಡಲಾಗಿದೆ. ಕಾಲೇಜಿನ ಆವರಣದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದು, ಭದ್ರತಾ ಸಿಬ್ಬಂದಿ ಹದ್ದಿನ ಕಣ್ಣಿಟ್ಟಿದ್ದಾರೆ. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ.4ರಂದು ಬೆಳಿಗ್ಗೆ 8ಗಂಟೆಯಿಂದ ಮತ ಎಣಿಕೆ ಕಾರ್ಯ ಪ್ರಾರಂಭಿಸಲಾಗುತ್ತದೆ. ಅಲ್ಲಿಯವರೆಗೂ ಭದ್ರತೆಯನ್ನು ಮುಂದುವರೆಸಲಾಗುತ್ತದೆ.

ಆಕಸ್ಮಿಕ ಅಪಘಾತ: ಮತದಾರರಿಗೆ ಗಾಯ

ಕೆ.ಆರ್.ಪೇಟೆ: ಮತದಾನಕ್ಕೆ ತೆರಳುವ ವೇಳೆ ಆಕಸ್ಮಿಕವಾಗಿ ಸಂಭವಿಸಿದ ಅಪಘಾತದಲ್ಲಿ 14ಕ್ಕೂ ಹೆಚ್ಚು ಮತದಾರರಿಗೆ ಗಾಯಗೊಂಡಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ

ತಾಲೂಕಿನ ಸಂತೆಬಾಚಹಳ್ಳಿ ಹೋಬಳಿಯ ಸಿಂಗಾಪುರದ ಗ್ರಾಮದ 14 ಕ್ಕೂ ಹೆಚ್ಚು ಮತದಾರರು ಮತದಾನಕ್ಕೆ ತೆರಳಲು ಮತಗಟ್ಟೆಯಲ್ಲಿ ಮತದಾನ ಮಾಡಲು ಮತದಾರರನ್ನು ಕೊಂಡೊಯ್ಯುತ್ತಿದ್ದ ವಾಹನ ಶುಕ್ರವಾರ ಮಧ್ಯಾಹ್ನ 11:35 ರ ಸಮಯದಲ್ಲಿ ಆಕಸ್ಮಿಕವಾಗಿ ಚಾಲಕನ ನಿಯಂತ್ರಣ ತಪ್ಪಿ ಸಂಭವಿಸಿದ ಅಪಘಾತದಲ್ಲಿ 9 ಜನರಿಗೆ ತೀವ್ರ ಸ್ವರೂಪದ ಗಾಯಗೊಂಡ ಗಾಯಾಳುಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಆಸ್ಪತ್ರೆಗೆ ತರ್ಹಾಗಿ ರವಾನಿಸಿದ್ದಾರೆ ಸ್ವಲ್ಪಪುಟ್ಟ ಗಾಯಗೊಂಡ ನಾಲ್ವರನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಪಡೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಅದೃಷ್ಟವಶ ಅಪಘಾತದಲ್ಲಿ ಯಾವುದೇ ಜೀವ ಹಾನಿಯಾಗದೆ ಕೂದಲು ಎಳೆಯಷ ಅಂತರದಲ್ಲಿ ಭಾರಿ ಅಪಘಾತದಿಂದ ಪಾರಾಗಿದ್ದಾರೆ ಎನ್ನಲಾಗಿದೆ.

ಲೋಕಸಭಾ ಚುನಾವಣೆ: ಮತದಾನ ವಿವರ

ಮಂಡ್ಯ : ಮಂಡ್ಯ ಲೋಕಸಭಾ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಳವಳ್ಳಿ– 77.23%, ಮದ್ದೂರು–82.99%, ಮೇಲುಕೋಟೆ –87.20%, ಮಂಡ್ಯ –77%, ಶ್ರೀರಂಗಪಟ್ಟಣ–84.48%, ನಾಗಮಂಗಲ – 84.73%, ಕೆ.ಆರ್.ಪೇಟೆ–80.63%, ಕೆ ಆರ್ ನಗರ ಕ್ಷೇತ್ರದಲ್ಲಿ 80.50% ರಷ್ಟು ಮತದಾನವಾಗಿದೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ಶೇ.80.41 ರಷ್ಟು ಮತದಾನವಾಗಿತ್ತು. ಈ ಬಾರಿ 1.26 ರಷ್ಟು ಹೆಚ್ಚಿನ ಮತದಾನವಾಗಿದೆ.ಕ್ಷೇತ್ರ ವ್ಯಾಪ್ತಿಯ 1779243 ಮತದಾರರ ಪೈಕಿ 1453067 ಮತದಾರರು ಹಕ್ಕು ಚಲಾಯಿಸಿದ್ದು ಈ ಪೈಕಿ 720520ಪುರುಷರು, 732503 ಮಹಿಳೆಯರಾಗಿದ್ದು 44 ಇತರರಾಗಿದ್ದಾರೆ.

ಮಳವಳ್ಳಿಯಲ್ಲಿ 195889 ಮತದಾರರು ಹಕ್ಕು ಚಲಾಯಿಸಿದ್ದು, ಈ ಪೈಕಿ 98146 ಪುರುಷರು.97741ಮಹಿಳೆಯರಾಗಿದ್ದು, ಮದ್ದೂರಿನಲ್ಲಿ 179038 ಮತದಾರರು ಮತದಾನ ಮಾಡಿದ್ದು, ಈ ಪೈಕಿ 87331 ಪುರುಷರು 91702 ಮಹಿಳೆಯರಾಗಿದ್ದಾರೆ, ಮೇಲುಕೋಟೆ ಕ್ಷೇತ್ರದಲ್ಲಿ 177368ಮತದಾರರು ಮತ ಚಲಾಯಿಸಿದ್ದರೆ ಇವರಲ್ಲಿ 88175 ಪುರುಷರು,89189 ಮಹಿಳೆಯರಾಗಿದ್ದಾರೆ, ಮಂಡ್ಯ ಕ್ಷೇತ್ರದಲ್ಲಿ 176841 ಮತದಾರರು ಮತದಾನ ಮಾಡಿದ್ದು, ಈ ಪೈಕಿ 86970 ಪುರುಷರು,89859 ಮಹಿಳೆಯರಾಗಿದ್ದಾರೆ.

ಶ್ರೀರಂಗಪಟ್ಟಣ ಕ್ಷೇತ್ರದಲ್ಲಿ 183851 ಮತದಾರರು ಮತ ಹಕ್ಕು ಚಲಾಯಿಸಿದ್ದು, ಇವರಲ್ಲಿ 90507 ಪುರುಷರು.93336 ಮಹಿಳೆಯರಾಗಿದ್ದಾರೆ,ನಾಗಮಂಗಲ ಕ್ಷೇತ್ರದಲ್ಲಿ 183480ಮತದಾರರು ಮತದಾನ ಮಾಡಿದ್ದು, ಈ ಪೈಕಿ 92195 ಪುರುಷರು,91281 ಮಹಿಳೆಯರಾಗಿದ್ದಾರೆ, ಕೆ.ಆರ್.ಪೇಟೆ ಕ್ಷೇತ್ರದಲ್ಲಿ 180477 ಮತದಾರರು ಮತ ಹಕ್ಕು ಚಲಾಯಿಸಿದ್ದರೆ ಇವರಲ್ಲಿ 89362 ಪುರುಷರು, 91112 ಮಹಿಳೆಯರಾಗಿದ್ದಾರೆ, ಕೆ ಆರ್ ನಗರ ಕ್ಷೇತ್ರದಲ್ಲಿ 176123 ಮತದಾರರು ಮತದಾನ ಮಾಡಿದ್ದರೆ ಇವರಲ್ಲಿ 87834 ಪುರುಷರು, 88283 ಮಹಿಳೆಯರಾಗಿದ್ದಾರೆ.

ಸಮಾಜಕ್ಕೆ ಸೇವೆ ಸಲ್ಲಿಸುವುದು ತೃಪ್ತಿಗಾಗಿ, ಆತ್ಮಸಂತೋಷಕ್ಕಾಗಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಜಗತ್ತಿನಲ್ಲಿ ಸೇವಾಸಂಸ್ಥೆಗಳು ಸ್ನೇಹ–ಸೇವೆ ಮಾಡುವುದರ ಧ್ಯೇಯದಿಂದ ನೂರಾರು ವರ್ಷ ಬದುಕಿ ಬಾಳಿ ಬೆಳೆಯುತ್ತವೆ ಎಂದು ಅಂತರಾಷ್ಟ್ರೀಯ ಅಲಯನ್ಸ್ ಸಂಸ್ಥೆಯ ನಿರ್ದೇಶಕ ಡಾ.ನಾಗರಾಜು ವಿ ಭೃರಿ ಹೇಳಿದರು.

ನಗರದ ಕರ್ನಾಟಕ ಸಂಘದ ಕೆವಿಎಸ್‌ಎಸ್ ಭವನದಲ್ಲಿ ಅಂತರಾಷ್ಟ್ರೀಯ ಅಲಯನ್ಸ್ ಸಂಸ್ಥೆ ಆಫ್ ಆಸೋಸಿಯೇಷನ್ ಜಿಲ್ಲೆ 268 ಎಸ್ ಮಂಡ್ಯ ಆಯೋಜಿಸಿದ್ದ ಮಂಡ್ಯ ಅಲಯನ್ಸ್ ಸಂಸ್ಥೆಗಳ 2024–25 ನೇ ಸಾಲಿನ ನೂತನ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಬೋಧನೆ ಮತ್ತು ಹೊಸ ಸಂಸ್ಥೆಗಳ ಉದ್ಘಾಟನೆ ಹಾಗೂ ಸೇವಾ ಚಟುವಟಿಕೆಗಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಂತರಾಷ್ಟ್ರೀಯ ಮಟ್ಟದಲ್ಲಿ ಸೇವಾಸಂಸ್ಥೆಗಳದ ರೆಡ್‌ಕ್ರಾಸ್, ರೋಟರಿ, ಅಲಯನ್ಸ್, ಲಯನ್ಸ್ ಸೇರಿದಂತೆ ಹಲವು ಸೇವಾಸಂಸ್ಥೆಗಳು ಇವೆ, ಇವು ಸ್ನೇಹ–ಸೇವೆ ಧ್ಯೇಯದಿಂದ ನೂರಾರು ವರ್ಷಗಳು ಬಾದುಕಿ ಬಾಳುತ್ತಿವೆ, ಇಂತಹ ಸಂಸ್ಥೆಗಳಲ್ಲಿ ಅಲಯನ್ಸ್ ಸಂಸ್ಥೆಗೆ ಮಂಡ್ಯದಲ್ಲಿ ಸಂಸ್ಥಾಪಕ ಸದಸ್ಯರಾಗಿರುವುದು ಚಿರಸ್ಮಾರ್ಹ ಎಂದು ನುಡಿದರು.



ಅಲಯನ್ಸ್ ಸಂಸ್ಥೆ ಪ್ರಾರಂಭ ಮಾಡಿದ್ದೇ ಸ್ನೇಹ ಮತ್ತು ಸೇವಾಕಾರ್ಯಕ್ಕಾಗಿ, ಇಲ್ಲಿ ಚುನಾವಣೆ ಮಧ್ಯ ಬರಬಾರದು, ರಾಜಕೀಯ ಬೆರೆಯಬಾರದು, ನಮ್ಮ ಹಣದಿಂದ ಸೇವಾಕಾರ್ಯ ಮಾಡಿ, ಸಮಾಜಕ್ಕೆ ಸೇವೆ ಸಲ್ಲಿಸುವುದು ತೃಪ್ತಿಗಾಗಿ, ಆತ್ಮಸಂತೋಷಕ್ಕಾಗಿ ಎಂದು ಹೇಳಿದರು.

ಬಳಿಕ ಕಾರ್ಯಕ್ರಮವನ್ನು ಉದ್ಘಾಟಿಸಿದ ಅಲಯನ್ಸ್ ಸಂಸ್ಥೆ ಜಿಲ್ಲೆ 268ರ ಎಸ್. ಜಿಲ್ಲಾ ರಾಜ್ಯಪಾಲ ಕೆ.ಟಿ.ಹನುಮಂತು ಮಾತನಾಡಿ, ನಶ್ವ ಸ್ವಚ್ಛವಾಗಿದೆ. ಕೆ.ಆರ್.ಪೇಟೆ ನಾರಾಯಣಗೌಡ ಅವರು ಎರಡು ಲಕ್ಷ ಅಂತರ ಎಂದು ಹೇಳಿದ್ದರು. ಕಡೆ ಪಕ್ಷ ಒಂದು ಲಕ್ಷ ಅಂತರದಲ್ಲಿಯಾದರೂ ಗೆಲುವು ಸಾಧಿಸುತ್ತೇವೆ ಎಂದು ಕುಮಾರಸ್ವಾಮಿಯವರ ಗೆಲುವಿನ ಬಗ್ಗೆ ಭವಿಷ್ಯ ನುಡಿದರು.

ಮುಂದಿನ ದಿಗಳ್ಳಿ ಅಲಯನ್ಸ್ ಸಂಸ್ಥೆಯ ಪದಾಧಿಕಾರಿಗಳು ಉತ್ತಮ ಸೇವಾಕಾರ್ಯ ಮಾಡಿ, ತಮ್ಮ ಹುಟ್ಟು ಹಬ್ಬ, ರಾಷ್ಟ್ರೀಯ–ಅಂತರಾಷ್ಟ್ರೀಯ ದಿನಗಳನ್ನು ಆಚರಿಸಿ, ಪರಿಸರ, ಆರೋಗ್ಯ ಸೇವೆಗೆ ಹೆಚ್ಚು ಮಹತ್ವ ನೀಡಿ ಎಂದರು.

ಎಲ್ಲರಲ್ಲೂ ಸೇವಾಮನೋಭಾವ ಬಾರದು, ಅಂತಹವರಲ್ಲೂ ಸೇವಾಕಾರ್ಯ ಮಾಡಿಸುವ ಉದ್ದೇಶಗಳು ನಮ್ಮಿಂದ ಆಗಬೇಕು, ಸ್ನೇಹ–ಸೇವೆ ಅಲಯನ್ಸ್ ಸಂಸ್ಥೆಯ ಉದ್ದೇಶವಾಗಿದೆ, ವರ್ಷಕ್ಕೆ 2ಸೇವಾಕಾರ್ಯಗಳನ್ನು ಮಾಡಿ, ಉತ್ತಮ ಸೇವಾ ಸಂಸ್ಥೆ ಎನ್ನಿಸಿಕೊಳ್ಳುವುದು ಅವಶ್ಯವಿದೆ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಸೇವಾ ಕಾರ್ಯ ಕ್ಕೆ ಚಾಲನೆ ನೀಡಲಾಯಿತು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು ಬಡ ವಿದ್ಯಾರ್ಥಿಗಳಿಗೆ ಮತ್ತು ವಿಕಲಚೇತನರಿಗೆ ಆರ್ಥಿಕ ನೆರವು ನೀಡಲಾಯಿತು.

ಕಾರ್ಯಕ್ರಮದಲ್ಲಿ ಅಂತರಾಷ್ಟ್ರೀಯ ಅಲಯನ್ಸ್ ಸಂಸ್ಥೆಯ ಮಾಜಿ ನಿರ್ದೇಶಕ ಜಿಪಿ ದಿವಾಕರ್, ಅಂತರಾಷ್ಟ್ರೀಯ ಸಮಿತಿ ಅಧ್ಯಕ್ಷರಾದ ಅಜಂತರಂಗಸ್ವಾಮಿ, ಕೆ ಮುನಿಯಪ್ಪ, 1ನೇ ಉಪ ರಾಜ್ಯಪಾಲ ಎಚ್ ಮಾದೇಗೌಡ, 2ನೇ ಉಪ ರಾಜ್ಯಪಾಲ ಕೆ.ಆರ್.ಶಶಿಧರ ಈಚೆಗೆರೆ, ಜಿಲ್ಲಾ ಸಂಪುಟ ಕಾರ್ಯದರ್ಶಿ ಕೆ.ಎಸ್ ಚಿದ್ರಶೇಖರ್, ಜಿಲ್ಲಾ ಸಂಪುಟ ಖಜಂಚಿ ಟಿ.ಎನ್ ರಕ್ಷಿತ್‌ರಾಜ್, ಪಿಆರ್‌ಓ ಅಪ್ಪಾಜಿ, ಜಿಲ್ಲಾ ರಾಯಬಾರಿ ಎಸ್.ಜೆ.ಮಂಜುನಾಥ್, ಪಿಎಸ್‌ಟಿ ಫಾರಂ ಭೇರ್ಮನ್ ಡಾ.ಮೈ.ಎಚ್.ರಮ್ಯಮ್ಮ ಪ್ರಾಂತೀಯ ಅಧ್ಯಕ್ಷ ಜಲಜಾಕ್ಷಿ ವಲಯ ಅಧ್ಯಕ್ಷ ಆರ್ ಮಹೇಶ್, ಎಂ.ಲೋಕೇಶ್, ಮಹಾಲಕ್ಷ್ಮಿ ಸೇರಿದಂತೆ ಹಲವರು ಹಾಜರಿದ್ದರು.

ಮೈತ್ರಿ ಅಭ್ಯರ್ಥಿ ಗೆಲುವು : ಮಾಜಿ ಶಾಸಕ ಶಿವರಾಮೇಗೌಡ

■ ಕಾಯಕಯೋಗಿ ಸುದ್ದಿ

ನಾಗಮಂಗಲ : ಮಂಡ್ಯ ಜಿಲ್ಲೆಯ ಎನ್‌ಡಿಎ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಗೆಲುವು ನಿಶ್ಚಿತ ಎಂದು ಮಾಜಿ ಶಾಸಕ ಎಲ್.ಆರ್. ಶಿವರಾಮೇಗೌಡ ಅಭಿಪ್ರಾಯ ಪಟ್ಟರು.

ಪಟ್ಟಣದ ತಾಲೂಕು ಪಂಚಾಯಿತಿ ಕಾರ್ಯಾಲಯ ಆವರಣದಲ್ಲಿನ ಮತ ಕೇಂದ್ರದಲ್ಲಿ ತಮ್ಮ ಆಪಾರ ಬೆಂಬಲಿಗರೊಂದಿಗೆ ತಮ್ಮ ಮತದಾನದ ಹಕ್ಕು ಚಲಾಯಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ತಾಲ್ಲೂಕಿನ ಜೆಡಿಎಸ್ ನಾಯಕರು ನಮ್ಮನ್ನು ಕಡೆಗಣಿಸಿದರು ನಾವು ನಮ್ಮ ಪಕ್ಷದ ಮೈತ್ರಿ ಅಭ್ಯರ್ಥಿ ಪರ ಕೆಲಸ ಮಾಡಿದ್ದೇವೆ ಎಂದರು. ಹೃದಯ ಶಸ್ತ್ರ ಚಿಕಿತ್ಸೆ ಹಿನ್ನೆಲೆಯಲ್ಲಿ ಚುನಾವಣಾ ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗಲಿಲ್ಲ ಇದರ ಬಗ್ಗೆ ಕುಮಾರಣ್ಣಮೊಂದಿಗೆ ದೂರವಾಣಿ ಮೂಲಕ ಮಾತನಾಡಿದ್ದೇನೆ. ನನ್ನ ಮಗ ಚೇತನ್ ಗೌಡ ಬಿಜೆಪಿ – ಜೆಡಿಎಸ್ ಮೈತ್ರಿ ಅಭ್ಯರ್ಥಿಯಾದ ಕುಮಾರಸ್ವಾಮಿಯವರ ಪರ ಚುನಾವಣಾ ಪ್ರಚಾರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ ಎಂದರು.

ಮತಗಟ್ಟೆ ಸಮೀಕ್ಷೆ ಒಪ್ಪುತ್ತಿರಲಿಲ್ಲ ಆದರೆ ಕಳೆದ ಎರಡು ಚುನಾವಣೆಯಿಂದ ಒಪ್ಪಲೇಬೇಕಾದ ಫಲಿತಾಂಶ ಬಂದಿದೆ. ಒಪ್ಪುತ್ತೇನೆ ಬಹುತೇಕ ಸಂಜೆಯ ಒಳಗೆ



ಫಲಿತಾಂಶ ಹೊರಬೀಳುತ್ತದೆ. ಅಧಿಕೃತ ಘೋಷಣೆಗೆ ಮಾತ್ರವೇ ಕಾಯಬೇಕಿದೆ ಎಂದರು. ಈ ಚುನಾವಣೆಯಲ್ಲಿ ಮೈತ್ರಿ ಧರ್ಮ ಸರಿಯಾಗಿ ಪಾಲನೆಯಾಗಿಲ್ಲ. ಈ ಬಗ್ಗೆ ಬೇಸರವಿದೆ ಎಂದು ತಮ್ಮ ಅಳಲನ್ನು ವ್ಯಕ್ತಪಡಿಸಿದರು. ಗೆಲುವು ಫೋಟೋ ಫಿನಿಷ್

ಹಾವು ಕಡಿದು ಓರ್ವ ಸಾವು



ಹಲಗೂರು:–ತಾಳೆಹಳ್ಳ ಗ್ರಾಮದಲ್ಲಿ ವಿಷಪೂರಿತ ಹಾವು ಕಚ್ಚಿ ಒರ್ವ ಮೃತಪಟ್ಟ ಘಟನೆ ನಡೆದಿದೆ. ಮೂಲತಃ ತಾಳೆಹಳ್ಳ ಗ್ರಾಮದ ವಾಸಿ ಚೌಡೇಗೌಡರ ಮಗನಾದ ನಾಗರಾಜು (38)ಶುಕ್ರವಾರ ತಮ್ಮ ಜಮೀನಿನಲ್ಲಿ ವ್ಯವಸಾಯ ಮಾಡುತ್ತಿದ್ದಾಗ ಹಾವು ಕಡಿದು ಜಮೀನಲ್ಲಿ ಬಿದ್ದಿದ್ದ ಇವರನ್ನು ತಕ್ಷಣ ಮಳವಳ್ಳಿ ಹಾಗೂ ಮಂಡ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 28–04–2024

ಮೈಸೂರು

ವಿಶೇಷ ಮತಗಟ್ಟೆಗಳಲ್ಲಿ ವಿಶೇಷ ಉಡುಗೆತೊಟ್ಟು ಮಿಂಚಿದ ಸಿಬ್ಬಂದಿ

ನಂಜನಗೂಡು: ತಾಲ್ಲೂಕಿನ ವಿಶೇಷ ಮತಗಟ್ಟೆಗಳಲ್ಲಿ ಚುನಾವಣಾ ಸಿಬ್ಬಂದಿಗಳು ಉಡುಗೆ ತೊಟ್ಟು ಕರ್ತವ್ಯಕ್ಕೆ ಹಾಜರಾಗಿದ್ದು ಎಲ್ಲರ ಗಮನ ಸೆಳೆಯಿತು.

ತಾಂಡವಪುರ, ಹುಲ್ಲಹಳ್ಳಿ ಯತ್ನಿಕ್ ಮತಗಟ್ಟೆಯಲ್ಲಿ ಬಿಳಿಪಂಚೆ , ಬಿಳಿಶರ್ಟ್ , ಶಲ್ಯ ಮೈಸೂರು ಪೇಟ ತೊಟ್ಟಿದ್ದು ಸಖಿ ಮತಗಟ್ಟೆಗಳಲ್ಲಿ ಗುಲಾಬಿ ಬಣ್ಣದ ಉಡುಗೆತೊಟ್ಟಿದ್ದರು.

ಬಂಕಹಳ್ಳಿಯ ಹಾಡಿ ಮತಗಟ್ಟೆಗಳಲ್ಲಿ ಪುಕ್ಕದ ಕಿರೀಟ, ನಡುವಿಗೆ ಸೊಪ್ಪಿನಿಂದ ಸುತ್ತಿಕೊಂಡು ಗಮನ ಸೆಳೆದರೆ, ಇತ್ತ ದೇವಿರಮ್ಮನಹಳ್ಳಿ ಪಾಳ್ಯದ ಯುವ ಮತಗಟ್ಟೆಯಲ್ಲಿ ಸಿಬ್ಬಂದಿಗಳು ಗರಿ ಗರಿ ಕೋಟು ಧರಿಸಿ ಹಾಜರಿದ್ದರು.

ಸಿಂಧುವಳ್ಳಿ ಗ್ರಾಮ ಪಂಚಾಯಿತಿಯ ಕುರಹಟ್ಟಿ ಗ್ರಾಮದ ಸಖಿಮತಗಟ್ಟೆಗೆ ಸ್ವ ಸಹಾಯ ಸಂಘದ ಮಹಿಳೆಯರು ಪಿಂಕ್ ಸೀರೆ ಧರಿಸಿ ಹಕ್ಕು ಚಲಾಯಿಸಲು ಬಂದಿದ್ದು ಎಲ್ಲರ ಪ್ರಶಂಸೆಗೆ ಪಾತ್ರವಾಗಿದೆ.



ಕಾಂಗ್ರೆಸ್‌ನವರು ಹಣದ ಹೊಳೆಯನ್ನೇ ಹರಿಸಿದ್ದಾರೆ; ಮಹದೇವಯ್ಯ ಕಿಡಿ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಕಾಂಗ್ರೆಸ್ಸವರು ಹಣದ ಹೊಳೆಯನ್ನೇ ಹರಿಸಿದ್ದಾರೆ ಎಂದು ಕಾಂಗ್ರೆಸ್ ವಿರುದ್ಧ ಮಾಜಿ ತಾಪಂ ಉಪಾಧ್ಯಕ್ಷ ಹಾಗೂ ಬಿಜೆಪಿ ಜಿಲ್ಲಾ ಎಸ್ ಸಿ ಮೋರ್ಚ ಮಾಜಿ ಅಧ್ಯಕ್ಷ ಸಿ.ಎಂ ಮಹದೇವಯ್ಯ ಕಿಡಿಕಾರಿದ್ದಾರೆ.

ವರುಣ ವಿಧಾನಸಭಾ ಕ್ಷೇತ್ರದ ನಂಜನಗೂಡು ತಾಲ್ಲೂಕಿನ ಚುಂಚನಹಳ್ಳಿ ಗ್ರಾಮದಲ್ಲಿ ಮಾತನಾಡಿದ ಅವರು, ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಅವರು ಗೆಲುವಿನ ಹಾದಿಯಲ್ಲಿದ್ದಾರೆ . ಕಾಂಗ್ರೆಸ್ಸವರು ಹಣದ ಹೊಳೆಯನ್ನು ಹರಿಸಿ ಚುನಾವಣೆಯನ್ನು ಎದುರಿಸಿದ್ದೇವೆ. ಏಳು ವಿಧಾನಸಭಾ ಕ್ಷೇತ್ರದಲ್ಲಿ ಅತಿ ಹೆಚ್ಚು ಮತಗಳಿಂದ ನಾವು ಗೆಲುವು ಸಾಧಿಸುತ್ತೇವೆ. ವರುಣ ಕ್ಷೇತ್ರದಲ್ಲಿ ಸುಮಾರು ಏಳು ಸಾವಿರಕ್ಕೂ ಹೆಚ್ಚು ಮತ ಲೀಡ್ ಬರುವ ನಿರೀಕ್ಷೆ ಇದೆ.

ಟಿ. ನರಸೀಪುರ ನಂಜನಗೂಡು, ಗುಂಡ್ಲುಪೇಟೆ, ಹನೂರು ಹೆಚ್.ಡಿ ಕೋಟೆ, ಕೊಳ್ಳೇಗಾಲ , ಚಾಮರಾಜನಗರ, ವರುಣ ವಿಧಾನಸಭಾ ಕ್ಷೇತ್ರಗಳಲ್ಲಿ ಅತಿ ಹೆಚ್ಚು ಮತದಾನವಾಗಿದೆ. ಹಾಗಾಗಿ ಸುಮಾರು ಒಂದು ಲಕ್ಷ ಮತಗಳ ಅಂತರದಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಗೆದ್ದೇ ಗೆಲ್ಲುತ್ತಾರೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಳಿಕ ಮಾಜಿ ಗ್ರಾಪಂ ಅಧ್ಯಕ್ಷ ನಾಗರಾಜು ಮಾತನಾಡಿ, ಬಾಲರಾಜು ಅವರು ರಾಜಶೇಖರ ಮೂರ್ತಿಯವರ ಗರಡಿಯಲ್ಲಿ ಬೆಳೆದಿರುವ ಸರಳ ವ್ಯಕ್ತಿ. ಯಾವುದೇ ಕಪ್ಪು ಚುಕ್ಕೆ ಇಲ್ಲ ಪ್ರಾಮಾಣಿಕ ರಾಜಕಾರಣಿಯಾಗಿದ್ದಾರೆ. ಮಹದೇಶ್ವರ ಬೆಟ್ಟದಿಂದ ಹಿಡಿದು ಹೆಗ್ಗಡದೇವನಕೋಟೆ ವರೆಗೂ ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಸಿದೆ. ಅನಿವಾರ್ಯ ಕಾರಣಗಳಿಂದ ಬಿಜೆಪಿ ಅಭ್ಯರ್ಥಿ ಬಾಲರಾಜು ಅವರು ಹೆಚ್ಚಾಗಿ ಪ್ರಚಾರಕ್ಕೆ ಹೋಗಿಲ್ಲ ಅವರ ಬದಲಾಗಿ ಬಿಜೆಪಿಯ ಮುಖಂಡರು ಹಾಗೂ ಕಾರ್ಯಕರ್ತರು ಉತ್ತಮವಾಗಿ ಕೆಲಸ ಮಾಡಿದ್ದಾರೆ. ವರುಣ ವಿಧಾನಸಭಾ ಕ್ಷೇತ್ರವನ್ನು ಹೊರತುಪಡಿಸಿ ಇನ್ನುಳಿದ ಏಳು ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಮುನ್ನಡೆಯಲ್ಲಿದೆ ಎಂದು ತಿಳಿದುಬಂದಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಪ್ರತಿನಿಧಿಸುತ್ತಿದ್ದ ವರುಣ ಕ್ಷೇತ್ರದಲ್ಲಿ 40 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆದ್ದು ಮುಖ್ಯಮಂತ್ರಿ ಆಗಿದ್ದಾರೆ.

ಆದರೆ ಈ ಲೋಕಸಭಾ ಚುನಾವಣೆಯಲ್ಲಿ ಅವರ ಸ್ವಕ್ಷೇತ್ರದಲ್ಲಿಯೇ ಅವರಿಗೆ ಹಿನ್ನಡೆಯಾಗಲಿದೆ. ಹಾಗಾಗಿ ಈ ಬಾರಿ ಬಿಜೆಪಿ ಅಭ್ಯರ್ಥಿ ಎಸ್. ಬಾಲರಾಜು ಅವರು ಮತ್ತೆ ಬಿಜೆಪಿ ಬಾವುಟ ಹಾರಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಡಿ.ಎಂ ಮಹದೇವ್ , ರವಿಕುಮಾರ್, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಗೂ ವರುಣ ಬಿಜೆಪಿ ಕಾರ್ಯದರ್ಶಿ ನಾಗರಾಜು, ಮುಖಂಡ ಚೀನ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇವಿಎಂ ಕೊಠಡಿಗೆ ಮೂರು ಹಂತದ ಭದ್ರತೆ



■ ಕಾಯಕಯೋಗಿ ಸುದ್ದಿ

ಮೈಸೂರು: ಮೈಸೂರು– ಕೊಡುಗು ಲೋಕಸಭಾ ಕ್ಷೇತ್ರದ ಸಾರ್ವತ್ರಿಕ ಚುನಾವಣೆ ಶಾಂತಿಯುತವಾಗಿ ಮುಗಿದಿದ್ದು, ಮೊಹರಾದ ಇವಿಎಂ, ವಿವಿ ಪ್ಯಾಟ್ ಹಾಗೂ ಸಂಬಂಧಿಸಿದ ಕಾಗದಪತ್ರಗಳನ್ನು ಇಲ್ಲಿನ ಪಡುವಾರಹಳ್ಳಿಯಲ್ಲಿರುವ ಮಹಾರಾಣಿ ನಿರ್ವಹಣಾ ಕಾಲೇಜಿನಲ್ಲಿ ಸಂಗ್ರಹಿಸಲಾಗಿದೆ. ಚುನಾವಣಾ ಸಿಬ್ಬಂದಿ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು. ಮತಯಂತ್ರಗಳನ್ನು ಸಂಗ್ರಹಿಸಿರುವ ಭದ್ರತಾ ಕೊಠಡಿಗೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಹಾಗೂ ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ಶನಿವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

'ಮತಯಂತ್ರಗಳನ್ನು ಇಟ್ಟಿರುವ ಭದ್ರತಾ ಕೊಠಡಿಗೆ ಮೂರು ಹಂತದ ಭದ್ರತೆ ಒದಗಿಸಲಾಗಿದೆ. ಮೊದಲ ಹಂತದಲ್ಲಿ ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆ ತುಕಡಿ, 2ನೇ ಹಂತದಲ್ಲಿ ಕರ್ನಾಟಕ ಸಶಸ್ತ್ರ ಮೀಸಲು ಪಡೆ ಹಾಗೂ 3ನೇ ಹಂತದಲ್ಲಿ ಸ್ಥಳೀಯ ಸಿವಿಲ್ ಪೊಲೀಸ್ ಸಿಬ್ಬಂದಿಯನ್ನು ಬಂದೋಬಸ್ತಿಗಾಗಿ ನಿಯೋಜಿಸಲಾಗಿದೆ. ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ನಿಗಾ ವಹಿಸಲಾಗಿದೆ' ಎಂದು ರಾಜೇಂದ್ರ ತಿಳಿಸಿದರು. ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ. ಮುತ್ತುರಾಜ್, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಮಹೇಶ್ ಪಾಲ್ಗೊಂಡಿದ್ದರು.

ಅಲ್ಪ ಪ್ರಮಾಣದ ಹಣ ಕೊಟ್ಟು ಮಲತಾಯಿ ಧೋರಣೆ ಮಾಡಿದ್ದಾರೆ: ಕೃಷ್ಣ ಬೈರೇಗೌಡ

ಬೆಂಗಳೂರು: ನಾವು 18,000 ಕೋಟಿಗೆ ಮನವಿ ಸಲ್ಲಿಸಿದ್ದೆವು. ಸಮಸ್ಯೆ ಗಂಭೀರವಾಗಿರುವ ಆಧಾರದ ಮೇಲೆ ಪರಿಹಾರ ಕೇಳಿದ್ದೆವು. ಈಗ 3,400 ಕೋಟಿಯಿಟ್ಟಿ ಹಣ ಕೊಟ್ಟಿದ್ದಾರೆ. ಅಲ್ಪ ಪ್ರಮಾಣದ ಹಣ ಕೊಟ್ಟು ಮಲತಾಯಿ ಧೋರಣೆ ಮಾಡಿದ್ದಾರೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಕೇಂದ್ರ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ.

ಕೇಂದ್ರದಿಂದ ಬರ ಪರಿಹಾರ ಬಿಡುಗಡೆ ವಿಚಾರವಾಗಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಪತ್ರ ಸಾರ್ವಜನಿಕ ಜಾಲತಾಣದಲ್ಲಿ ಓಡಾಡುತ್ತಿದೆ. ಕೇಂದ್ರ ಸರ್ಕಾರದ ಜೊತೆ ಮಾತುಕತೆ ಮಾಡಿದ್ದೇವೆ. ಆದರೆ ಯಾವುದೇ ಅಧಿಕೃತ ದೃಢೀಕರಣ ಆಗಿಲ್ಲ. ನಾವು ಅಧಿಕೃತ ಆದೇಶದ ನಿರೀಕ್ಷೆಯಲ್ಲಿದ್ದೇವೆ ಎಂದರು.

ರಾಜಧಾನಿಯಲ್ಲಿ ಹಿಂದಿನಷ್ಟೇ ಮತದಾನ

ಬೆಂಗಳೂರು: ಚುನಾವಣಾ ಆಯೋಗ ಹಾಗೂ ಬಿಬಿಎಂಪಿ ಕೈಗೊಂಡಿದ್ದ ಮತ ಜಾಗೃತಿ ಹೊರತಾಗಿಯೂ ಶುಕ್ರವಾರ ನಡೆದ ಲೋಕಸಭಾ ಚುನಾವಣೆಯಲ್ಲಿ ರಾಜಧಾನಿಯಲ್ಲಿ ಹಿಂದಿನಷ್ಟೇ ಮತದಾನವಾಗಿದ್ದು, ನಗರ ನಿವಾಸಿಗಳು ಮತಗಟ್ಟೆಗಳಿಗೆ ಬರುವುದಿಲ್ಲ ಎಂಬ ಅಪವಾದ ಎಂದಿನಂತೆ ಮುಂದುವರಿದಿದೆ. ಬೆಂಗಳೂರು ಉತ್ತರ, ದಕ್ಷಿಣ ಹಾಗೂ ಕೇಂದ್ರ ಲೋಕಸಭಾ ಕ್ಷೇತ್ರಗಳಲ್ಲಿ ಸರಾಸರಿ ಶೇ. 53.49ರಷ್ಟಾಗಿದೆ. ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಕ್ಷೇತ್ತಕ್ಕೆ ಒಳಪಟ್ಟಿರುವ ಪಾಲಿಕೆಯ ಪ್ರದೇಶಗಳ ನಾಲ್ಕು ವಿಧಾನಸಭಾ ಕ್ಷೇತ್ತರ ಮತದಾನ ಪ್ರಮಾಣವನ್ನು ಗಣನೆಗೆ ತೆಗೆದುಕೊಂಡರೆ, ಬಿಬಿಎಂಪಿಯ ಎಲ್ಲ 28 ವಿಧಾನಸಭಾ ಕ್ಷೇತ್ತಗಳಲ್ಲಿನ ಸರಾಸರಿ ಮತದಾನ ಶೇ.54. ಹಿಂದಿನ ಚುನಾವಣೆಯಲ್ಲೂ ಇಷ್ಟೇ ಪ್ರಮಾಣದ ಮತ ಚಲಾವಣೆಯಾಗಿತ್ತು

ಆಕಸ್ಮಿಕ ಬೆಂಕಿ ಅನಾಹುತದಿಂದ ಸಂಕಷ್ಟಕ್ಕೆ ಒಳಗಾದ ಬಡ ಕುಟುಂಬಗಳು

ಕುಟುಂಬಗಳ ಸಂಕಷ್ಟ ಆಲಿಸಿ ನೆರವಿಗೆ ನಿಂತ ಡಾ.ಹನುಮಂತನಾಥ ಸ್ವಾಮೀಜಿ

ಸರ್ಕಾರದಿಂದ ಬಡ ಕುಟುಂಬಗಳಿಗೆ ವಸತಿಗಾಗಿ ಸ್ವಾಮೀಜಿ ಆಗ್ರಹ

■ ಕಾಯಕಯೋಗಿ ಸುದ್ದಿ
ಮಂಜುಸ್ವಾಮಿ ಎಂ ಎನ್ ಕೊರಟಗೆರೆ

ಕೊರಟಗೆರೆ : ತಾಲೂಕಿನ ಹೊಳವನಹಳ್ಳಿ ಹೋಬಳಿಯ ಕ್ಯಾಮೇನಹಳ್ಳಿ ಗ್ರಾಮಂ ವ್ಯಾಪ್ತಿಯ ಚಿಂಪುಗಾನಹಳ್ಳಿ ಗ್ರಾಮದಲ್ಲಿ ಆಕಸ್ಮಿಕ ಅಗ್ನಿ ಅವಘಡದಿಂದ 10ಕ್ಕೂ ಹೆಚ್ಚು ಗುಡಿಸಲಿಗೆ ಬೆಂಕಿ ಬಿದ್ದು ದಿನಬಳಕೆ ವಸ್ತುಗಳು ಸೇರಿದಂತೆ 30ಕ್ಕೂ ಅಧಿಕ ಮೇಕೆಗಳು ಬೆಂಕಿಯ ಕೆನ್ನಾಲಿಗೆಗೆ ಬಲಿಯಾಗಿತ್ತು.

ಬೆಂಕಿ ಅನಾಹುತದಿಂದ ಗುಡಿಸಲು ಮತ್ತು ದಿನಬಳಕೆ ವಸ್ತುಗಳು ಕಳೆದುಕೊಂಡು ಊಟಕ್ಕೂ ಪರದಾಡುವಂತಾಗಿದ್ದ ಬಡಕುಟುಂಬಗಳಿಗೆ ಎಲೆರಾಂಪುರ ಕುಂಚಿಟಿಗ ಮಹಾಸಂಸ್ಥಾನ ಮಠದ ಡಾ.ಹನುಮಂತನಾಥ ಸ್ವಾಮೀಜಿ ಸ್ಥಳಕ್ಕೆ ಧಾವಿಸಿ ಬಡಕುಟುಂಬಗಳ ಸಂಕಷ್ಟವನ್ನು ಗಮನಿಸಿ ಆಹಾರದ ದಿನಸಿ ಕಿಟ್ ಮತ್ತು ಮಕ್ಕಳಿಗೆ ನೋಟ್ ಪುಸ್ತಕವನ್ನು ವಿತರಣೆ ಮಾಡಿದ್ದು ಇಂದೇ ಗೃಹ ಸಚಿವರ ಗಮನಕ್ಕೆ ತಂದು ಕೂಡಲೇ ನಿವೇಶನದ ವ್ಯವಸ್ಥೆ ಮಾಡುವಂತೆ ಒತ್ತಾಯ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ನಂತರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ತಾಲೂಕಿನ ಚಿಂಪುಗಾನಹಳ್ಳಿ ಗ್ರಾಮದಲ್ಲಿ ಸುಮಾರು 15ಕ್ಕೂ ಹೆಚ್ಚಿನ ಬಡಕುಟುಂಬಗಳು ಗುಡಿಸಲು ಹಾಕಿಕೊಂಡು ಜೀವನ ಸಾಗಿಸುತ್ತಿದ್ದರು. ಆದರೆ ಆಕಸ್ಮಿಕ ಅಗ್ನಿ ಅವಘಡದಿಂದ 11ಕ್ಕೂ ಹೆಚ್ಚಿನ ಗುಡಿಸಲಿಗೆ ಬೆಂಕಿ ಬಿದ್ದು ದಿನಬಳಕೆ ವಸ್ತುಗಳು ಸೇರಿದಂತೆ ಇತರೆ ವಸ್ತುಗಳು ಸಂಪೂರ್ಣ ಭಸ್ಮವಾಗಿದೆ ಎಂದರು.

2 ವರ್ಷದ ಹಿಂದೆಯೂ ಕೂಡ ಸ್ಥಳಕ್ಕೆ ಭೇಟಿ ನೀಡಿದ ವೇಳೆ ಇದೇ ರೀತಿ ಕೆಲವು ಗುಡಿಸಲಿಗೆ ಬೆಂಕಿ ಬಿದ್ದು ದಿನಬಳಕೆ ವಸ್ತುಗಳು ನಾಶವಾಗಿತ್ತು ಮತ ಚಲಾವಣೆ ಗೆಂದು ಮತಗಟ್ಟೆ ಹೋದಂತಹ ಸಂದರ್ಭದಲ್ಲಿ ಯಾವುದೇ ಪ್ರಾಣಾಪಾಯ ಹಾಗಿಲ್ಲ. ಹಿಂದೆ ನಡೆದ ಘಟನೆ ಮತ್ತೆ ಮರು ಕಳಿಸಿದೆ. ಅಗ್ನಿ ಅನಾಹುತದಿಂದ ಗುಡಿಸಲಿಗೆ ಮತ್ತು ದಿನಬಳಕೆ ವಸ್ತುಗಳು, 40ಕ್ಕೂ ಅಧಿಕ ಮೇಕೆಗಳು ಸಂಪೂರ್ಣ ವಾಗಿ ಸುಟ್ಟುಹೋಗಿದೆ ಎಂದು ಇಲ್ಲಿನ ಕುಟಂ ಬಗಳು ಮಾಹಿತಿ ನೀಡಿದ್ದಾರೆ. ಇಂದೇ ಗೃಹ ಸಚಿವರನ್ನು ಭೇಟಿ ಮಾಡಿ ಇಲ್ಲಿನ ಸಮಸ್ಯೆಯ ಬಗ್ಗೆ ತಿಳಿಸಿ ಕೂಡಲೇ ಹಕ್ಕುಪತ್ರ ಕೊಟ್ಟು ಬಡಕುಟುಂಬಗಳಿಗೆ ಸೂರು ಕಲ್ಪಿಸುವಂತೆ ಒತ್ತಾಯ ಮಾಡುತ್ತೇನೆ ಎಂದು ಹೇಳಿದರು.



ಪದೇ ಪದೇ ಮರುಕಳಿಸುತ್ತಿರುವ ಘಟನೆ

ಕಳೆದ 2 ವರ್ಷದ ಹಿಂದೆಯೂ ಕೂಡ ಗುಡಿಸಲಿಗೆ ಬೆಂಕಿ ತಗುಲಿ ದಿನಬಳಕೆ ವಸ್ತುಗಳು ಸೇರಿದಂತೆ ಗುಡಿಸಲು ಸುಟ್ಟುಹೋಗಿತ್ತು. ಆದರೆ ಗ್ರಾಪಂ ಅಧಿಕಾರಿಗಳು ಸ್ಥಳೀಯ ಬಡ ಕುಟುಂಬಗಳಿಗೆ ಪ್ರತ್ಯೇಕವಾಗಿ ಸ್ಥಳ ಗುರುತಿಸಿ ನಿವೇಶನದ ಹಕ್ಕು ಪತ್ರ ನೀಡದೆ ಇರುವುದೇ ಇಂತಹ ಘಟನೆಗೆ ಕಾರಣವಾಗಿದೆ. 3 ತಿಂಗಳೊಳಗೆ ಇಲ್ಲಿ ವಾಸಿಸುವಂತಹ ಕುಟುಂಬಗಳಿಗೆ ನಿವೇಶನಕ್ಕೆ ಸ್ಥಳ ಏಂಗಡಣೆ ಮಾಡಿ ಎಲ್ಲಾ ಕುಟುಂಬಗಳಿಗೂ ಹಕ್ಕು ಪತ್ರವನ್ನು ವಿತರಣೆ ಮಾಡುವಂತೆ ಗ್ರಾಪಂ ಸದಸ್ಯರಿಗೆ ಎಲೆರಾಂಪುರ ಕುಂಚಿಟಿಗ ಮಹಾಸಂಸ್ಥಾನ ಶ್ರೀಮಠದ ಡಾ. ಹನುಮಂತನಾಥ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಚಿಂಪುಗಾನಹಳ್ಳಿ ಗ್ರಾಮದಲ್ಲಿ 11ಕ್ಕೂ ಹೆಚ್ಚಿನ ಗುಡಿಸಲಿಗೆ ಬೆಂಕಿ ಬಿದ್ದ ದಿನಬಳಕೆ ವಸ್ತುಗಳು ಸಂಪೂರ್ಣವಾಗಿ ನಾಶವಾಗಿದೆ. ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಅವರ ನೋವನ್ನು ಆಲಿಸಿದ್ದೇನೆ. ಕಳೆದ 2 ವರ್ಷದ ಹಿಂದೆಯೂ ಕೂಡ ಇದೇ ರೀತಿ ಘಟನೆ ನಡೆದಿತ್ತು ಎಂದು ಸ್ಥಳೆ ನಿವಾಸಿಗಳು ನೋವನ್ನು ಹಂಚಿಕೊಂಡಿದ್ದಾರೆ. ಬಡ ಕುಟುಂಬಗಳ ಸಂಕಷ್ಟವನ್ನು ಗಮನಿಸಿ ತಿಂಗಳಿಗೆ ಪೂರ್ಸಕ್ಕೆ ಆಗುವಷ್ಟು ಆಹಾರ ಪದಾರ್ಥವನ್ನು ವಿತರಣೆ ಮಾಡಲಾಗಿದೆ. ಕೂಡಲೇ ಶಾಸಕರು ಮತ್ತು ಗ್ರಾಪಂ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಇವರಿಗೆ ಸೂರಿನ ವ್ಯವಸ್ಥೆ ಕಲ್ಪಿಸಬೇಕು.

–ಅನಿಲ್‌ಕುಮಾರ್, ಬಿಜೆಪಿ ಮುಖಂಡ. ಕೊರಟಗೆರೆ.

ಅಂತಿಮ ಮತದಾನದ ವಿವರ

ಮೈಸೂರು ಕೊಡಗು ಲೋಕಸಭಾ ಕ್ಷೇತ್ರ ಶೇ.70.62 ಮತದಾನ ವಿಧಾನಸಭಾ ಕ್ಷೇತ್ರವಾರು ವಿವರ ಇಂತಿದೆ:

ಮಡಿಕೇರಿ– 75.41 %, ವಿರಾಜಪೇಟೆ– 73.88 % ಪಿರಿಯಾಪಟ್ಟಣ –80.19%
ಹುಣಸೂರು –77.91% ಚಾಮುಂಡೇಶ್ವರಿ –73.40%
ಕೃಷ್ಣರಾಜ –60.87 %*
ಚಾಮರಾಜ –60.98%*
ನರಸಿಂಹರಾಜ –65.55 %*

ಮೈಸೂರು ಕೊಡಗು ಲೋಕಸಭಾ ಚುನಾವಣೆ ನಿಮಿತ ಪಿರಿಯಾಪಟ್ಟಣ ತಾಲೂಕಿನ ಆಲನಹಳ್ಳಿ ಮತಗಟ್ಟೆ ಸಂಖ್ಯೆ 159 ರಲ್ಲಿ ಮಹಿಳೆಯರು ಮತ್ತು ಪುರುಷರು ಸಾರಥಿ ಸಾಲಿನಲ್ಲಿ ನಿಂತು ಮತದಾನ ಮಾಡಿದರು



ಹೊಂಗೆ, ಅರಳಿ ಮರದ ನೆರಳಿನಲ್ಲಿ ರಾಜಕೀಯ ಚರ್ಚೆ..

ಬಾರಿ ಚರ್ಚೆಗೆ ಗ್ರಾಸವಾಯಿತು ರಾಜಕೀಯ ಪಕ್ಷಗಳ ಸೋಲು ಗೆಲುವಿನ ಲೆಕ್ಕಾಚಾರ..!

■ ಕಾಯಕಯೋಗಿ ಸುದ್ದಿ
ಸಿ.ಎಂ ಸುಗಂಧರಾಜು

ಮೈಸೂರು: ಚಾಮರಾಜನಗರ ಲೋಕಸಭಾ ಚುನಾವಣೆ ನಡೆದು ಒಂದು ದಿನ ಕಳೆದಿದೆ. ಪಟ್ಟಣ ಮತ್ತು ಗ್ರಾಮೀಣ ಪ್ರದೇಶದ ಯಾವುದೇ ಮೂಲೆಯಲ್ಲಿ ನೋಡಿದರು ಬಿಸಿಲಿನ ಬೆಗೆಯ ಕಾವುಗಿಂತಲೂ ಮಿಗಿಲಾಗಿ ರಾಜಕೀಯ ಪಕ್ಷಗಳ ಚರ್ಚೆ ಬಲು ಜೋರಾಗಿ ನಡೆಯುತ್ತಿದೆ.

ಹಾಗಾದ್ರೆ ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಎರಡು ರಾಜಕೀಯ ಪಕ್ಷಗಳ ಜಿದ್ದಾಜಿದ್ದಿನಲ್ಲಿ ಯಾರ ವಶವಾಗುತ್ತದೆ ಎಂಬುದು ಹೊಂಗೆ ಮರದ ನೆರಳು ಅರಳಿಕಟ್ಟೆ ಜಗಲಿಯ ಪಡಸಾಲೆಯಲ್ಲಿ ಪರ ವಿರೋಧದ ಚರ್ಚೆಯಲ್ಲಿ ಯಾವ ಪಕ್ಷದ ಅಭ್ಯರ್ಥಿ ಮೇಲುಗೈ ಸಾಧಿಸಲಿದ್ದಾರೆ. ಗಡಿ ಜಿಲ್ಲೆಯ ದೊರೆ ಯಾರಾಗಲಿದ್ದಾರೆ.! ಎಂಬುದು ಕುತೂಹಲ ಕೆರಳಿಸಿದೆ ಹಾಗಾದ್ರೆ ತಡ ಯಾಕೆ..? ಬನ್ನಿ ಅವರ ಮಾತನ್ನು ಕೇಳೋಣ..

ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಸೇರಿರುವ ನಂಜನಗೂಡು, ವರುಣ, ಹೆಚ್.ಡಿ ಕೋಟೆ, ಗುಂಡ್ಲುಪೇಟೆ, ಹನೂರು, ಚಾಮರಾಜನಗರ, ಕೊಳ್ಳೇಗಾಲ, ಒಟ್ಟು ಎಂಟು ವಿಧಾನಸಭಾ ಕ್ಷೇತ್ರಗಳಿಂದ ಈ ಬಾರಿ ಬರೋಬ್ಬರಿ 76.72 ರಷ್ಟು ಮತದಾನ ನಡೆದಿದೆ.

ವರುಣ,ಹೆಚ್.ಡಿ.ಕೋಟೆ, ಹನೂರು ಮತ್ತು ಕೊಳ್ಳೇಗಾಲ ಕ್ಷೇತ್ರಗಳಲ್ಲಿ ಪ್ರತಿ ಕ್ಷೇತ್ರದಲ್ಲಿ 30 ಸಾವಿರ ಲೀಡ್ ಬರುತ್ತದೆ. ನಂಜನಗೂಡು, ಚಾಮರಾಜನಗರ, ತಿ.ನರಸೀಪುರ ಕ್ಷೇತ್ರಗಳಲ್ಲಿ ಅಲ್ಪ ಮಟ್ಟದಲ್ಲಿ ಅಂದರೆ 15 ರಿಂದ 20, ಸಾವಿರ ಮತಗಳು ಲೀಡ್ ಬರುತ್ತದೆ. ಗುಂಡ್ಲುಪೇಟೆಯಲ್ಲಿ ಸಮಬಲದ ಪೈಪೋಟಿ ಇದೆ. ಒಟ್ಟಾರೆಯಾಗಿ 2 ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಗೆಲುವು ಸಾಧಿಸಲಿದ್ದಾರೆ ಎಂಬುವುದು ಕಾಂಗ್ರೆಸ್ ಪಕ್ಷದ ಮುಖಂಡರ ಪ್ರಬಲವಾದ ಲೆಕ್ಕಾಚಾರ ವಾಗಿದೆ. ಪ್ರಮುಖವಾಗಿ ಈ ಬಾರಿಯ ಲೋಕ ಸಭಾ ಚುನಾವಣೆಯಲ್ಲಿ ಯಾವ ಕ್ಷೇತ್ರದಲ್ಲಿಯೂ ಕೂಡ ಬಿಜೆಪಿ ಪಕ್ಷದ ಮುಖಂಡರು ಸರಿಯಾದ ರೀತಿಯಲ್ಲಿ ಪ್ರಚಾರ ಮಾಡಿಲ್ಲ. ರಾಜ್ಯ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–4
28–04–2024
ತುಮಕೂರು–ಚಾಮರಾಜನಗರ

1 ಲಕ್ಷ ಮತಗಳ ಅಂತರದಿಂದ ಸ್ಟಾರ್ ಚಂದ್ರು ಗೆಲುವು

ಮದ್ದೂರು : ಶಾಸಕ ಕೆ.ಎಂ.ಉದಯ್ ಅವರು ಸ್ವಗ್ರಾಮ ತಾಲೂಕಿನ ಕದಲೂರು ಗ್ರಾಮದಲ್ಲಿ ಪತ್ನಿ ವೀಣಾ ಅವರೊಂದಿಗೆ ಆಗಮಿಸಿ ಮತ ಚಲಾಯಿಸಿದರು. ಶಾಸಕ ಕೆ.ಎಂ.ಉದಯ್ ಅವರು ಮಾತನಾಡಿ, ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಅವರು ಚುನಾವಣೆಯಲ್ಲಿ 1 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಜನತೆ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಈ ಒನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ಅಧಿಕ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದರು. ಜಿಲ್ಲೆಯ ಇತಿಹಾಸದಲ್ಲಿ ಕ್ಷೇತ್ರದ ಮತದಾರರು ಸ್ಥಳೀಯ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತಾರೆಯೇ ಹೊರತು ಹೊರ ಜಿಲ್ಲೆಯವರನ್ನಲ್ಲ. ಜಿಲ್ಲೆಯ ಜನತೆ ಪ್ರಜ್ಞಾವಂತರು ಸ್ವಾಭಿಮಾನವನ್ನು ಎಂದಿಗೂ ಬಿಟ್ಟು ಕೊಡಲ್ಲ ಎಂದರು.

ವಿನುತಾಕೆ.ಎಂ.ಉದಯ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕದಲೂರು ರಾಮಕೃಷ್ಣ, ತಾಪಂ ಮಾಜಿ ಸದಸ್ಯ ಕೆ.ಆರ್.ಮಹೇಶ್ ಇದ್ದರು.



ಇಂಡಿಗನತ್ತ ಗ್ರಾಮಸ್ಥರ ಹಲ್ಲೆ: ಮೆಂದಾರೆ ಗ್ರಾಮಸ್ಥರ ಭೇಟಿ ಮಾಡಿದ ಅಧಿಕಾರಿಗಳು

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಹನೂರು ತಾಲೂಕಿನ ಇಂಡಿಗನತ್ತ ಗ್ರಾಮದಲ್ಲಿ ಮತ ಚಲಾವಣೆ ಮಾಡಲು ಹೋಗಿದ್ದ ಆದಿವಾಸಿ ಜನಾಂಗದ ಮೇಲೆ ಇಂಡಿಗನತ್ತ ಗ್ರಾಮಸ್ಥರು ಹಲ್ಲೆ ಮಾಡಿದ್ದ ಒನ್ನೆಲೆ ಗಾಯಗೊಂಡಿದ್ದ ಮೆಂದಾರೆ ಗ್ರಾಮಸ್ಥರನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಭೇಟಿ ನೀಡಿ ಧೈರ್ಯ ತುಂಬಿದ್ದಾರೆ.

ಮೆಂದಾರೆ ಗ್ರಾಮದಲ್ಲಿ ಸುಮಾರು 60 ಕುಟುಂಬಗಳಿದ್ದು 80 ಮತದಾರರಲ್ಲಿದ್ದು ಸುಮಾರು 180 ಜನಸಂಖ್ಯೆ ಹೊಂದಿದೆ. ಈ ಗ್ರಾಮದಲ್ಲಿ ಇರುವ ಎಲ್ಲರೂ ಸಹ ಆದಿವಾಸಿ ಬುಡಕಟ್ಟು ಜನಾಂಗಕ್ಕೆ ಸೇರಿದವರಾಗಿದ್ದಾರೆ.

ಏಪ್ರಿಲ್ 26ರಂದು ನಡೆದ ಲೋಕಸಭಾ ಚುನಾವಣೆಗೆ ಇಂಡಿಗನತ ಗ್ರಾಮಸ್ಥರು ಮತದಾನ ಬಹಿಷ್ಕಾರ ಮಾಡಿದ್ದರು, ಆದರೆ ಅಧಿಕಾರಿಗಳು ಮೆಂದರೆ ಗ್ರಾಮದವರನ್ನು ಮನವೊಲಿಸಿ ಮತಗಟ್ಟೆಗೆ ಕರೆ ತಂದಾಗ ಇಂಡಿಗನತ್ತ ಗ್ರಾಮಸ್ಥರು ಹಲ್ಲೆ ಮಾಡಿದ್ದರು. ಹಲ್ಲೆಯಿಂದ ಸುಮಾರು ಇಪ್ಪತ್ತಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಶುಕ್ರವಾರ ರಾತ್ರಿ ಆದ್ದರಿಂದ ತೀವ್ರ ಗಾಯಗೊಂಡಿದ್ದ ಮೂವರಿಗೆ ಮಾತ್ರ ಪ್ರಥಮ ಚಿಕಿತ್ಸೆ ನೀಡಲಾಗಿತ್ತು . ಶುಕ್ರವಾರ ತಾಲೂಕು ವೈದ್ಯಾಧಿಕಾರಿ ಡಾ. ಪ್ರಕಾಶ್ ನೇತೃತ್ವದ ತಂಡ ಗ್ರಾಮದಲ್ಲಿ ಗಾಯಗೊಂಡಿದ್ದ ಎಲ್ಲರಿಗೂ ಚಿಕಿತ್ಸೆ ನೀಡಿದ್ದಾರೆ.

ಮೆಂದಾರೆ ಗ್ರಾಮಕ್ಕೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಂಜುಳಾ, ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ನವೀನ್ ಮೆಂದ ಹಾಗೂ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಉದೇಶರವರು ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಗ್ರಾಮಸ್ಥರಿಗೆ ಧೈರ್ಯ ತುಂಬಿದ್ದಾರೆ.

ಇವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಉದೇಶ್ ರವರು ಮಾತನಾಡಿ ಗ್ರಾಮದ ಯಾರೊಬ್ಬರು ಭಯಪಡುವುದು ಬೇಡ ನಿಮ್ಮ ರಕ್ಷಣೆಗೆ ನಾವಿದ್ದೇವೆ. ನೀವು ಗ್ರಾಮದಲ್ಲಿರುವೇ ಧೈರ್ಯದಿಂದ ಇರಿ ಏನಾದರೂ ಸಮಸ್ಯೆಗಳಿದ್ದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿ ಎಂದು ಭರವಸೆ ನೀಡಿದರು.





ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಂಜುಳಾ ಮಾತನಾಡಿ ಆದಿವಾಸಿ ಬುಡಕಟ್ಟು ಜನಾಂಗದವರ ಜೊತೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ನಿಮ್ಮ ಜೊತೆ ಸದಾ ಇರುತ್ತದೆ ಸರ್ಕಾರ ನಿಮ್ಮ ಜೊತೆ ಇರುತ್ತದೆ ನಿಮ್ಮ ಸುರಕ್ಷತೆಗಾಗಿ ಗ್ರಾಮದಲ್ಲಿ ಪೊಲೀಸರನ್ನು ನಿಯೋಜನೆ ಮಾಡಲಾಗಿದೆ. ನಿಮಗೆ ಭಯವಿದ್ದು ನೀವು ಒಪ್ಪಿ ಬಂದರೆ ತಾತ್ಕಾಲಿಕವಾಗಿ ಮಲೆ ಮಾದೇಶ್ವರ ಬೆಟ್ಟದ ಆಶ್ರಮ ಶಾಲೆಯಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಕಲ್ಪಿಸಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ ಎಂದು ತಿಳಿಸಿದರು. ಗ್ರಾಮಸ್ಥರು ಎಲ್ಲರೂ ಸೇರಿ ಒಂದು ನಿರ್ಧಾರಕ್ಕೆ ಬರುತ್ತೇವೆ ಎಂದು ತಿಳಿಸಿದ್ದಾರೆ. ಇವಳೇ ಗ್ರಾಮಸ್ಥರು ಮಾತನಾಡಿ ಮೆಂದಾರೆ ಗ್ರಾಮದಲ್ಲಿರುವ ನಾವೆಲ್ಲರೂ ಒಳ್ಳೆಯ ನಿವೇಶನ, ಜಮೀನು ನೀಡಿದರೆ ನಾವು ಅಲ್ಲಿಗೆ ಬರುತ್ತೇವೆ. ನಮ್ಮನ್ನು ಬೇರೆ ಕಡೆಗೆ ಸ್ಥಳಾಂತರ ಮಾಡಿ ಎಂದು ಮನವಿ ಮಾಡಿದ್ದಾರೆ. ಈ ವೇಳೆ ಅರಣ್ಯ ಇಲಾಖೆ ಅಧಿಕಾರಿಗಳು ನೀವು ತಮ್ಮ ಮನವಿಯನ್ನು ನೀಡಿದರೆ ಈ ವಿಚಾರವನ್ನು ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

ಗಾಯಗೊಂಡವರಿಂದಲೂ ದೂರು: ತಮ್ಮ ಮತದಾರರ ಹಕ್ಕನ್ನು ಚಲಾಯಿಸಲು ಹೋಗಿದ್ದ ಮೆಂದಾರೆ ಗ್ರಾಮದ ನಿವಾಸಿಗಳ ಮೇಲೆ ಹಲ್ಲೆ ಮಾಡಿರುವ ಇಂಡಿಗನತ್ತ ಗ್ರಾಮಸ್ಥರ ವಿರುದ್ಧ ಮಲೆ ಮಹದೇಶ್ವರ ಬೆಟ್ಟ ಪೋಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ನೀರಿನ ಪೈಪ್ ಲೈನ್ ಕಿತ್ತು ಹಾಕಿರುವ ಗ್ರಾಮಸ್ಥರು: ಮೆಂದರೆ ಗ್ರಾಮದ ಆದಿವಾಸಿ ಬುಡಕಟ್ಟು ಜನಾಂಗದವರು ಮತ ಚಲಾವಣೆ ಮಾಡುತ್ತಿರುವ ವಿಚಾರ ತಿಳಿಯುತ್ತಿದ್ದಂತೆ ಇಂಡಿಗನತ್ತ ಗ್ರಾಮಸ್ಥರು ಮೆಂದರೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸಿರುವ ನೀರಿನ ಪೈಪ್ ಲೈನ್ ಅನ್ನು ಕಿತ್ತು ಬಿಸಾಡಿದ್ದಾರೆ. ಶನಿವಾರ ಪಿಡಿಓ ಕಿರಣ್ ಹಾಗೂ ನೀರು ಗಂಟಿಗಳು ಪೈಪ್ಲೈನ್ ದುರಸ್ತಿಪಡಿಸಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿದ್ದಾರೆ. ಗ್ರಾಮಕ್ಕೆ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ನವೀನ್ ಮಠದ, ಇನ್ಸ್ ಪೆಕ್ಟರ್ ಗಳಾದ ಶಶಿಕುಮಾರ್, ಮನೋಜ್ ಕುಮಾರ್, ಜಗದೀಶ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಭೇಟಿ ನೀಡಿದ್ದರು.

ನಾಳೆ ಇಂಡಿಗನತ್ತ ಗ್ರಾಮದಲ್ಲಿ ಮರು ಮತದಾನಕ್ಕೆ ಅವಕಾಶ




ಹನೂರು: ತಾಲೂಕಿನ ಮಲೆ ಮಾದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇಂಡಿಗನತ್ತ ಗ್ರಾಮದಲ್ಲಿ ಮತ ಪೆಟ್ಟಿಗೆ ಧ್ವಂಸ ಮಾಡಿದ್ದ ಒನ್ನೆಲೆ ಏಪ್ರಿಲ್ 29ರ ಸೋಮವಾರ ಮರು ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ.

ಏಪ್ರಿಲ್ 26ರಂದು ರಾಜ್ಯದ 14 ಕ್ಷೇತ್ರಗಳ ಪೈಕಿ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಇಂಡಿಗನತ್ತ ಗ್ರಾಮದಲ್ಲಿನ 146ರ ಮತಗಟ್ಟೆ ಸಂಖ್ಯೆಯ ಇಂಡಿಗನತ್ತ ಗ್ರಾಮಸ್ಥರು ಮತದಾನ ಬಹಿಷ್ಕರಿಸಿದ್ದರು. ಆದರೆ ಇದೆ ಮತಗಟ್ಟೆ ವ್ಯಾಪ್ತಿಯ ಮೆಂದಾರೆ ಗ್ರಾಮದ ನಿವಾಸಿಗಳು ಮತ ಚಲಾವಣೆ ಮಾಡಲು ಮತಗಟ್ಟೆಗೆ ಹೋಗಿದ್ದ ವೇಳೆ ಇಂಡಿಗನತ್ತ ಗ್ರಾಮಸ್ಥರು ರೊಚ್ಚಿಗೆದ್ದು ಮತಯಂತ್ರವನ್ನು ದ್ವಂಸ ಮಾಡಿದ್ದರು.

ಈ ಒನ್ನೆಲೆ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಸಿಟಿ ಶಿಲ್ಪಾ ನಾಗ್ ರವರು ಚುನಾವಣಾ ಆಯೋಗಕ್ಕೆ ಮಾಹಿತಿ ನೀಡಿದ್ದರು. ಇವರ ವರದಿಯಂತೆ ಏಪ್ರಿಲ್ 29 ರ ಸೋಮವಾರ ಮರು ಮತದಾನಕ್ಕೆ ಸಮಯ ನಿಗದಿ ಮಾಡಿದ್ದು ಬೆಳಗ್ಗೆ ಏಳು ಗಂಟೆಯಿಂದ ಸಂಜೆ 6:00 ವರೆಗೆ ಮತದಾನ ನಡೆಯಲಿದೆ. ಚುನಾವಣಾ ಆಯೋಗದ ಸೂಚನೆಗಳಿಗೆ ಅನುಗುಣವಾಗಿ ಸದರಿ ಮತಗಟ್ಟೆಯಲ್ಲಿ ಹೊಸ ಮತದಾನವನ್ನು ನಡೆಸಲಾಗುವುದು. ಮತದಾನದ ಪ್ರದೇಶಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡಿ ಹೊಸ ಚುನಾವಣೆಯ ಬಗ್ಗೆ ರಾಜಕೀಯ ಪಕ್ಷಗಳು ಮತ್ತು ಸ್ಪರ್ಧಿಸುವ ಅಭ್ಯರ್ಥಿಗಳಿಗೆ ಲಿಖಿತವಾಗಿ ತಿಳಿಸಿ ಎಂದು ಚುನಾವಣಾ ಆಯೋಗದ ಅಧೀನ ಕಾರ್ಯದರ್ಶಿ ಅವಧೇಶ್ ಕುಮಾರ್ ಸಿನ್ಹಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಣ, ಹೆಂಡದ ಹೊಳೆ ತಡೆಯುವಲ್ಲಿ ಚುನಾವಣಾ ಆಯೋಗ ವಿಫಲ : ಎಂ.ಕೃಷ್ಣಮೂರ್ತಿ ಆರೋಪ

ಗೆಲ್ಲಲಿ ಸೋಲಲಿ ಜಿಲ್ಲೆಯ ಅಭಿವೃದ್ಧಿಗೆ ಹೋರಾಡುವೆ



ಚಾಮರಾಜನಗರ:– ಈ ಬಾರಿಯ ಲೋಕಸಭಾ ಚುನಾವಣೆಯ ಮತದಾನ ಮುಗಿದಿದ್ದು ಚುನಾವಣೆಯಲ್ಲಿ ನಾನು ಗೆಲ್ಲಲಿ ಸೋಲಲಿ ಜಿಲ್ಲೆಯ ಅಭಿವೃದ್ಧಿಗೆ ಹೋರಾಡುವೆ ಎಂದು ಬಿಎಸ್ಪಿ ರಾಜ್ಯ ಸಂಯೋಜಕ . ಅಭ್ಯರ್ಥಿ ಎಂ.ಕೃಷ್ಣಮೂರ್ತಿ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಈ ಬಾರಿಯ ಚುನಾವಣೆಯಲ್ಲಿ ಅನಿರೀಕ್ಷಿತವಾಗಿ ಸ್ಪರ್ಧೆ ಮಾಡಿದ್ದೆ. ಲೋಕಸಭಾ ಕ್ಷೇತ್ರದಲ್ಲಿ ಪಕ್ಷ ಸಂಘಟನೆಯಲ್ಲಿ ತೊಡ ಗಿಕೊಳ್ಳುತ್ತೇನೆ. ಮುಂಬರುವ ಗ್ರಾಪಂ, ತಾಪಂ, ಜಿಪಂ, ವಿಧಾನಸಭಾ, ಲೋಕಸಭಾ ಚುನಾವಣೆಗಳಲ್ಲಿ ಶಕ್ತಿ ಮೀರಿ ಪಕ್ಷ ಸಂಘಟನೆ ಮಾಡುತ್ತೇನೆ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಬಿಎಸ್ ಪಿ ಗೆದ್ದೆ ಗೆಲ್ಲುತ್ತೇವೆ ಎಂದರು . ನಾನು ಹೇಳಿದಂತೆ ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಅಗತ್ಯವಿದ್ದು ಅದಕ್ಕಾಗಿ ಹೋರಾಟ ಮಾಡುತ್ತೇನೆ. ಅಲ್ಲದೇ 2 ನೇ ಹಂತದ ಕಬಿನಿ ಯೋಜನೆ ಕ್ಷೇತ್ರ ವ್ಯಾಪ್ತಿಯಲ್ಲಿರುವ ಕಬಿನಿ ಸೇರಿದಂತೆ ಇತರೆ ಜಲಾಶಯಗಳಿಂದ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಜಾರಿಗೆ ಯತ್ನಿಸುತ್ತೇನೆ. ಚಾಮರಾಜನಗರ ಲೋಕಸಭಾ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಹೋರಾಟ ಮಾಡಲಾಗುವುದು ಚಾಮರಾಜನಗರ ತಾಲೂಕಿನ ಚಿಕ್ಕಮೂಡಲಹಳ್ಳಿಗೆ ಮೂಲಭೂತ ಸೌಕರ್ಯಗಳ ನ್ನು ಕಲ್ಪಿಸದೆ ಇರುವುದು ವಿಪರ್ಯಾಸ. ಇಂಡಿಗನತ್ತ ಸೇರಿದಂತೆ ಇತರೆ ಕಾಡಂಚಿನ ಗ್ರಾಮಗಳಿಗೆ ಮೂಲ ಸೌಕರ್ಯ ಒದಗಿಸಲು ಜಿಲ್ಲಾಡಳಿತ, ಸರ್ಕಾರದ ಮೇಲೆ ಒತ್ತಡ ಹೇರುತ್ತೇನೆ. ಈ ಚುನಾವಣೆಯಲ್ಲಿ ಶ್ರಮಿಸಿದ ಪಕ್ಷದ ಮುಖಂಡರು, ಕಾರ್ಯಕರ್ತರು ಶ್ರಮವಹಿಸಿ ಕೆಲಸ ಮಾಡಿದ್ದಾರೆ. ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ತಿಳಿಸಿದರು.

ಕಾಂಗ್ರೆಸ್‌ಗೆ ಸೋಲಿನ ಭಯ : ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ 7 ಕಾಂಗ್ರೆಸ್ ಶಾಸಕರಿದ್ದಾರೆ. ಅಲ್ಲದೇ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವ ಎಚ್.ಸಿ.ಮಹದೇವಪ್ಪ ಅವರು ಕ್ಷೇತ್ರದಲ್ಲಿ ಇದ್ದಾರೆ. ಜೊತೆಗೆ ಸರ್ಕಾರದ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದರೂ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಎಸ್ಪಿಯಿಂದಾಗಿ ಕಾಂಗ್ರೆಸ್‌ಗೆ ಸೋಲಿನ ಭೀತಿ ಎದುರಾಗಿದೆ ಎಂದರು. ಈ ಬಾರಿಯ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಹಣ, ಮದ್ಯದ ಹೊಳೆ ಹರಿದಿದೆ. ಮದ್ಯದ ಪಾಕೆಟ್ ಮೇಲೆ ಕಾಂಗ್ರೆಸ್ ಅಭ್ಯರ್ಥಿ ಭಾವಚಿತ್ರ ಹಾಕಿ ವಿತರಿಸಲಾಗಿದೆ. ಆ ಮೂಲಕ ಚುನಾವಣಾ ನೀತಿ ಸಂಹಿತೆಯನ್ನು ಗಾಳಿಗೆ ತೂರಲಾಗಿದೆ. ಚುನಾವಣೆಯಲ್ಲಿ ಹಣ, ಹೆಂಡದ ಹೊಳೆ ಹರಿಯುವುದನ್ನು ತಡೆಯುವ ನಿಟ್ಟಿನಲ್ಲಿ ಚುನಾವಣಾ ಆಯೋಗ ವಿಫಲವಾಗಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಬಿಎಸ್ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹ.ರಾ.ಮಹೇಶ್, ಜಿಲ್ಲಾಧ್ಯಕ್ಷ ಎನ್.ನಾಗಯ್ಯ, ಉಪಾಧ್ಯಕ್ಷ ಬ್ಯಾಡಮೂಡ್ಲು ಬಸವಣ್ಣ ಪ್ರಧಾನ ಕಾರ್ಯದರ್ಶಿ ಬ.ಮ.ಕೃಷ್ಣಮೂರ್ತಿ, ಸಂಯೋಜಕ ರಾಜಶೇಖರ್, ಉಸ್ತುವಾರಿ ಅಮಚವಾಡಿ ಪ್ರಕಾಶ್ ಹಾಜರಿದ್ದರು

ನಾಗಮಲೆ ಭಕ್ತರ ತಡೆಗಟ್ಟಿರುವುದು ಇಂಡಿಗನತ್ತ ಗಲಾಟೆಗೆ ಕಾರಣ

ಚಾಮರಾಜನಗರ: ಹನೂರು ತಾಲೂಕಿನ ಮಲೆಮಾದೇಶ್ವರ ಬೆಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ಇಂಡಿಗನತ್ತ ಗ್ರಾಮದಲ್ಲಿ ಗಲಾಟೆ ನಡೆಯಲು ನಾಗಮಲೆಗೆ ಭಕ್ತರನ್ನು ತಡೆಗಟ್ಟಿರುವುದೇ ಮುಖ್ಯ ಕಾರಣ ಎಂಬುದು ಮೇಲ್ನೋಟಕ್ಕೆ ಕಂಡು ಬಂದಿದೆ.

ತಾಲೂಕಿನ ಪ್ರಸಿದ್ಧ ಧಾರ್ಮಿಕ ಯಾತ್ರ ಸ್ಥಳ ಮಲೆ ಮಾದೇಶ್ವರ ಬೆಟ್ಟದಿಂದ ನಾಗಮಲೆ ಶ್ರೀ ಕ್ಷೇತ್ರಕ್ಕೆ ಪ್ರತಿದಿನ ಸಾವಿರಾರು ಭಕ್ತಾದಿಗಳು ಕಾಲ್ನಡಿಗೆ ಮೂಲಕ ಹಾಗೂ ಇಂಡಿಗನತ್ತ ಗ್ರಾಮದವರೆಗೆ ಜೀಪ್ ಮೂಲಕ ತೆರಳುತ್ತಿದ್ದರು.

ಇಂಡಿಗನತ್ತ ಗ್ರಾಮದ ಸುಮಾರು 70ಕ್ಕೂ ಹೆಚ್ಚು ಯುವಕರುಗಳು ಜೀಪ್ ಗಳನ್ನು ಖರೀದಿಸಿ ಮಲೆ ಮಹದೇಶ್ವರ ಬೆಟ್ಟದಿಂದ ಇಂಡಿಗನತ್ತ ಗ್ರಾಮದವರೆಗೆ ಭಕ್ತಾದಿಗಳನ್ನು ಕರೆದೊಯ್ಯುತ್ತಿದ್ದರು. ಇದರಿಂದ ಇವರ ಜೀವನ ನಡೆಯುತ್ತಿತ್ತು ಇದಲ್ಲದೆ ಇಂಡಿಗನತ್ತ ಗ್ರಾಮದಲ್ಲಿ ಕೆಲವು ಕುಟುಂಬದವರು ಸಣ್ಣ ಪುಟ್ಟ ಅಂಗಡಿಗಳನ್ನು ಹಾಕಿಕೊಂಡು ಜೀವನ ನಡೆಸುತ್ತಿದ್ದರು.

ಕಳೆದ ಫೆಬ್ರವರಿ 10 ರಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಅರಣ್ಯ ಪ್ರದೇಶದಲ್ಲಿ ಆನಿಯಂತ್ರಿತ ಚಾರಣ ಚಟುವಟಿಕೆಗಳಿಂದ ಪ್ಲಾಸ್ಟಿಕ್ ಬಳಕೆಯಿಂದಾಗಿ ಪರಿಸರಕ್ಕೆ ಹಾನಿ ಹಾಗೂ ಜಲಮೂಲಗಳು ಕಲುಷಿತಗೊಳ್ಳುತ್ತಿರುವುದರಿಂದ ಚಾರಣ ತಾಣಗಳಲ್ಲಿ ಆನ್ಲೈನ್ ಬುಕಿಂಗ್ ವ್ಯವಸ್ಥೆ ಮತ್ತು ನಿರ್ದಿಷ್ಟ ಸಂಖ್ಯೆಗೆ ಸೀಮಿತಗೊಳಿಸುವ ಅಗತ್ಯವಿರುವುದಾಗಿ ತಿಳಿಸಿ ಪ್ರಮಾಣಿತ ಕಾರ್ಯವಿಧಾನ ರೂಪಿಸುವವರೆಗೆ ಆನ್ಲೈನ್ ಬುಕಿಂಗ್ ವ್ಯವಸ್ಥೆ ಇಲ್ಲದೆ ಎಲ್ಲಾ ಚಾರಣ ತಾಣಗಳಲ್ಲಿ ತಾತ್ಕಾಲಿಕವಾಗಿ ಚಾರಣ ನಿರ್ಭಂಧಿಸುವಂತೆ ಆದೇಶ ಹೊರಡಿಸಿದ್ದರು.

ಈ ನಿಟ್ಟಿನಲ್ಲಿ ಪಾಲಾರ್ ವನ್ಯಜೀವಿ ವಲಯ ವಲಯ ಅರಣ್ಯಾಧಿಕಾರಿರವರು ನಾಗಮಲೆಗೆ ತಿರುಚುತ್ತಿರುವ ಚಾರಣಿಗರು ಮತ್ತು ವನ್ಯ ಪ್ರಾಣಿಗಳ ನಡುವೆ ಸಂಘರ್ಷವಾಗಿ ಮಾನವ ಪ್ರಾಣಿ ಹಾನಿಯಾಗಿರುವ ನಿದರ್ಶನಗಳು ಕೂಡ ಇರುತ್ತೆ. ಮಲೆ ಮಹದೇಶ್ವರ ಬೆಟ್ಟದಿಂದ ಇಂಡಿಗನತ್ತ ಗ್ರಾಮದವರೆಗೆ ಪ್ರಾಣಿಸಿಯ ವಾಹನಗಳಲ್ಲಿ ಬಹು ಪಾಲು ವಾಹನಗಳ ವಿಮಾ ಕ್ಷಮತೆ ಪ್ರಮಾಣ ಪತ್ರ ಇರದೇ ಇರುವುದು ಕೂಡ ಗಮನಕ್ಕೆ ಬಂದಿದ್ದು ಈ ಮೇಲಿನ ಅಂಶಗಳ ಆಧಾರವಾಗಿ ಹಾಗೂ ಸಚಿವರು ನೀಡಿರುವ ಉಲ್ಲೇಖ ಪತ್ರದಲ್ಲಿ ತಿಳಿಸಿರುವ ಸೂಚನೆಯ ಅನುಸಾರವಾಗಿ ಪರಿಸರ ಅಭಿವೃದ್ಧಿ ಸಮಿತಿ ತುಳಸಿಕೆರೆ ವತಿಯಿಂದ ಚಾರಣಿಗರನ್ನು ಹಾಸಗಿ ವಾಹನಗಳಿಗೆ ಪ್ರವೇಶ ಶುಲ್ಕ ಪಡೆಯುವುದನ್ನು ಈ ಕೂಡಲೇ ನಿಲ್ಲಿಸಿ, ಆನ್ಲೈನ್ ಬುಕಿಂಗ್ ವ್ಯವಸ್ಥೆಯನ್ನು ಹೊಂದುವವರೆಗೆ ತಾತ್ಕಾಲಿಕವಾಗಿ ಯಾವುದೇ ವಾಹನ ಚಾರಣಿಗರು ಅರಣ್ಯ ಪ್ರದೇಶದ ಒಳಗಡೆ ಪ್ರವೇಶಿಸಿದಂತೆ ಸೂಕ್ತ ಕ್ರಮ ಜರುಗಿಸಿ ಕೈಗೊಂಡ ಕ್ರಮದ ಕುರಿತು ವರದಿ ಸಲ್ಲಿಸಲು ತಿಳಿಸಿ, ಜೀಪ್ ಗಳಿಗೆ ನಿರ್ಬಂಧ ಹೇರಲಾಗಿತ್ತು. ಅಂದಿನಿಂದ ನಿರಂತರವಾಗಿ ಪ್ರತಿಭಟನೆ ನಡೆಯುತ್ತಲೇ ಇತ್ತು. ಆದರೆ ಇದನ್ನು ಯಾರೊಬ್ಬರೂ ನೇರವಾಗಿ ಹೇಳದೆ ಮೂಲಭೂತ ಸೌಲಭ್ಯ ಕಲ್ಪಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದರು. ಇದೇ ವೇಳೆ ಬಂದ ಲೋಕಸಭಾ ಚುನಾವಣೆಯನ್ನು ಬಹಿಷ್ಕಾರ ಮಾಡ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5 | 28-04-2024

ಹಾಸನ-ರಾಮನಗರ

ಅಜ್ಜಿಯೊಂದಿಗೆ ತೆರಳಿ ಮೊದಲ ಬಾರಿಗೆ ಮತದಾನ-ಯುವಕನ ಸಂತಸ-ಹಬ್ಬದಂತೆ ಆಚರಿಸಲು ಕರೆ



■ ಕಾಯಕಯೋಗಿ ಸುದ್ದಿ

ಮಳವಳ್ಳಿಪ್ರಸಕ್ತ ಲೋಕಸಭೆ ಚುನಾವಣೆಗೆ ಯುವ ಮತದಾರನೊಬ್ಬ ತನ್ನ ಅಜ್ಜಿಯೊಂದಿಗೆ ತೆರಳಿ ಮೊದಲ ಬಾರಿಗೆ ಮತ ಚಲಾಯಿಸುವ ಮೂಲಕ ತನ್ನ ಹಕ್ಕಿನ ಮಹತ್ವದ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾನೆ.

ಮಾಗನೂರಿನ ಶ್ರೀ ಶಿವರಾತ್ರೀಶ್ವರ ಬಡಾವಣೆಯ ನಿವಾಸಿ , ಮೈಸೂರಿನ ಜೆ.ಸಿ.ಇಂಜಿನಿಯರಿಂಗ್ ಕಾಲೇಜಿನಲ್ಲಿ ಬಿ.ಇ ಶಿಕ್ಷಣ ಪಡೆಯುತ್ತಿರುವ ಎಂ.ಎಸ್.ಸುಶೀಲ್ ಕುಮಾರ್ ತನ್ನ ಅಜ್ಜಿ ರತ್ನಮ್ಮರವರನ್ನು ಜೊತೆಯಲ್ಲಿ ಕರೆದುಕೊಂಡು ಹೋಗಿ ಅವರು ಮತ ಹಾಕಿದ ನಂತರ ತಾನು ಮತದಾನ ಮಾಡಿ,ಮತದಾನದ ಪ್ರಕ್ರಿಯೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದನು.

ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ನಮಗೆ ಎಂತಹ ಸರ್ಕಾರ ಬೇಕು,ಯಾವ ಪಕ್ಷ ಬೇಕು,ಯಾವ ವ್ಯಕ್ತಿಯ ಆಢಳತ ಬೇಕು ಎನ್ನುವುದನ್ನು ನಾವೇ ನಿರ್ದರಿಸುವ ಮತದಾನ ಎನ್ನುವುದು ಬಹಳ ಪವಿತ್ರವಾಗಿದೆ.ಇದನ್ನು ದೇಶದ ಪ್ರತಿಯೊಬ್ಬರೂ ಪ್ರಜಾಪ್ರಭುತ್ವದ ಹಬ್ಬದಂತೆ ಮತದಾನ ಮಾಡಿ ಆಚರಿಸುವಂತೆ ಕರೆ ನೀಡಿದ ಅವರು ಇಂತಹ ಅಧಿಕಾರ,ಹಕ್ಕು ,ಸುವರ್ಣ ಅವಕಾಶ ನೀಡಿದ ಸಂವಿದಾನ ಶಿಲ್ಪಿ ಬಿ ಆರ್ ಅಂಬೇಡ್ಕರ್ ರವರಿಗೆ ನಮನ ಸಲ್ಲಿಸಿದರು.

ತಾನು ಅಕ್ರಮ ಮಾಡಿ, ಬೇರೆಯವರ ಮೂತಿಗೆ ಒರೆಸುವುದು ಕುಮಾರಸ್ವಾಮಿ ಜಾಯಮಾನ: ಡಿಸಿಎಂ ಡಿಕೆಶಿ

■ ಕಾಯಕಯೋಗಿ ಸುದ್ದಿ

ಕನಕಪುರ:ತಾನು ಅಕ್ರಮ ಮಾಡಿ, ಅದನ್ನು ಬೇರೆಯವರ ಮೂತಿಗೆ ಒರೆಸುವುದು ಕುಮಾರಸ್ವಾಮಿ ಜಾಯಮಾನ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾಜಿ ಸಿಎಂ ಹೆಚ್.ಡಿಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು.

ತಮ್ಮ ಹುಟ್ಟೂರು ಕನಕಪುರದ ದೊಡ್ಡಆಲಹಳ್ಳಿಯ ಮತ ಗಟ್ಟೆ ಸಂಖ್ಯೆ 245 ರಲ್ಲಿ ಕುಟುಂಬ ಸಮೇತ ಮತದಾನ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿ ಚುನಾವಣೆ ಯಲ್ಲಿ ಗಿಫ್ಟ್ ಕಾರ್ಡ್ ನೀಡುತ್ತಿದ್ದಾರೆ ಎಂಬ ಕುಮಾರ ಸ್ವಾಮಿ ಆರೋಪದ ಬಗ್ಗೆ ಚುನಾವಣೆ ಯಲ್ಲಿ ಗಿಫ್ಟ್ ಕಾರ್ಡ್, ಹಣ ಹಂಚುತ್ತಿರುವುದು ಕುಮಾರಸ್ವಾಮಿ ಹಾಗೂ ಮೈತ್ರಿ ಪಕ್ಷದವರು ಅವರು ತಾವು ಮಾಡ ಬಾರದನ್ನು ಮಾಡಿ ಬೇರೆಯವರ ಮೂತಿಗೆ ಒರೆಸುವ ಪ್ರಯತ್ನ ಮಾಡುತ್ತಿದ್ದಾರೆ.ಬಿಜೆಪಿ ಶಾಸಕರುಗಳು ಕ್ಷೇತ್ರ ದಲ್ಲಿ ಕಾರ್ಡ್ ಗಳನ್ನು ಹಂಚುತ್ತಿದ್ದಾರೆ,ಅವರು ಕಾರ್ಡ್ ಹಂಚಿ ಈಗ ನಮ್ಮ ಮೇಲೆ ಹಾಕುತ್ತಿದ್ದಾರೆ ಎಂದು ಆರೋಪಿಸಿದರು.

ನಾವು ಜನರ ಮುಂದೆ ಕೈ ಮುಗಿದು ಮತ ಕೇಳುತ್ತಿದ್ದರೆ, ಅವರು ಚುನಾವಣೆ ಸಂದರ್ಭದಲ್ಲಿ ಪ್ರತ್ಯಕ್ಷರಾಗಿದ್ದಾರೆ. ಕುಮಾರಸ್ವಾಮಿ ಚುನಾವಣೆಗೂ ಮುನ್ನ ಮಂಡ್ಯಕ್ಕೆ ಹೋಗಿದ್ದರೇ? ರಾಮನಗರ, ಕನಕಪುರಕ್ಕೆ ಹೋಗಿದ್ದರಾ? ಹೀಗಾಗಿ ಹಿಂಡು ಹಿಂಡಾಗಿ ಅವರ ಕಾರ್ಯಕರ್ತರು ನಮ್ಮ ಪಕ್ಷ ಸೇರುತ್ತಿದ್ದಾರೆ ಎಂದು ತಿಳಿಸಿದರು.

ನಮ್ಮ ವಿರುದ್ಧ ಏನಾದರೂ ಸಾಕ್ಷಿ ಇದ್ದರೆ ಆಯೋಗಕ್ಕೆ ದೂರು ನೀಡಲಿ ಲುಲು ಮಾಲ್ ನಲ್ಲಿ 10 ಸಾವಿರ ಗಿಫ್ಟ್ ಕೂಪನ್ ನೀಡುತ್ತಿದ್ದಾರೆ ಎಂಬ ಕುಮಾರಸ್ವಾಮಿಯವರ ಆರೋಪಕ್ಕೆ ಉತ್ತರಿಸಿ ಅವನು ಸತ್ಯಹರಿಶ್ಚಂದ್ರನ ಮೊಮ್ಮಗ ಅಲ್ಲವೇ, ಚುನಾವಣಾ ಆಯೋಗಕ್ಕೆ ಹೋಗಿ ದೂರು ನೀಡಲು ಹೇಳಿ ಖಾಲಿ ಮಾತಿನ ಮೂಲಕ ಪಿಟ್ ಆಂಡ್ ರನ್ ಮಾಡುವುದಲ್ಲ. ಸಾಕ್ಷಿ ಇದ್ದರೆ ಆಯೋಗಕ್ಕೆ ದೂರು ನೀಡಲಿ ನಮ್ಮ ಸರ್ಕಾರ ಐದು ಗ್ಯಾರಂಟಿ ಯೋಜನೆ ಗಳನ್ನು ಜಾರಿ ಮಾಡಿದ್ದು ಇದರಿಂದ ಜನರಿಗೆ



ಶಕ್ತಿ ಬಂದಿದೆ, ಅವರ ಮನೆಯಲ್ಲಿ ಕೆಲಸ ಮಾಡುವವ ರಿಗೂ ನಮ್ಮ ಗ್ಯಾರಂಟಿ ತಲುಪುತ್ತಿದೆ, ಅವರ ಮತಗಳು ನಮಗೆ ಬರಲಿದೆ, ಈಗ ಐದು ನ್ಯಾಯ ಯೋಜನೆಗಳ ಮೂಲಕ 25 ಗ್ಯಾರಂಟಿ ಯೋಜನೆ ಘೋಷಣೆ ಮಾಡಿದ್ದು ನಾವು ಬಸವಣ್ಣನ ನಾಡಿನವರು ನುಡಿದಂತೆ ನಡೆದಿದ್ದು ಮಲ್ಲಿಕಾರ್ಜುನ ಖರ್ಗೆ ಅವರು ಕೂಡ ಬಸವಣ್ಣನ ನಾಡಿನಲ್ಲಿ ಜನಿಸಿದ್ದು ನಮ್ಮ ಸರ್ಕಾರ ಗ್ಯಾರಂಟಿ ಯೋಜನೆ ಜಾರಿ ಮಾಡಿ ಜನರ ಬದುಕನ್ನು ಬದಲಾವಣೆ ಮಾಡಿದ್ದೇವೆ ಎಂದು ತಿಳಿಸಿದರು.

ನಮ್ಮ ಪಕ್ಷದ ನಾಯಕರ ಮನೆ ಮೇಲೆ ದಾಳಿ ಮಾಡಿ ಕಿರುಕುಳ ನೀಡಲಾಗುತ್ತಿದ್ದು ಹೀಗಾಗಿ ನಾನು ಐಟ ಇಲಾಖೆ ಕಚೇರಿಗೆ ನಮ್ಮ ನಾಯಕರು ಚುನಾವಣೆಗೆ ಬರಬಾರದು ಎಂದು ಷಡ್ಯಂತ್ರ ರೂಪಿಸುತ್ತಿದ್ದಾರೆ. ಇಲ್ಲಿ ಶಾಲೆಗಳಿರುವ ಜಾಗ ನಮ್ಮ ಸ್ವಂತ ಜಾಗ ಅದನ್ನು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ನಾವು ದಾನ ಮಾಡಿದ್ದೇವೆ,ಈ ಕ್ಷೇತ್ರ ದಲ್ಲಿ ಇಂತಹ ಎಂಟು ಕಟ್ಟಡಗಳನ್ನೆ ನೋಡಿ. ಕುಮಾರ ಸ್ವಾಮಿ ಬಂದು ಈ ಕಟ್ಟಡ ಕಟ್ಟಿದ್ದನಾ? ಈ ರೀತಿ ತಮ್ಮ ಆಸ್ತಿ ದಾನ ಮಾಡಿದ್ದಾರಾ ಅವರಿಗೆ ಬೇರೆಯವರ ಏಳಿಗೆ ಅರಿಯಿಸಿಕೊಳ್ಳಲು ಆಗುವುದಿಲ್ಲ.ಚುನಾವಣೆ ಮುಗಿಯುತ್ತಿ ದ್ದಂತೆ ಅವರು ಬಿಜೆಪಿ ವಿರುದ್ಧ ಮುಗಿಬೀಳುತ್ತಾರೆ. ದೇವೇಗೌಡರು ಈಗಾಗಲೇ ಬಿಜೆಪಿ ನಾಯಕರು ಸಪಕರಾ ನೀಡುತ್ತಿಲ್ಲ ಎಂದು ಹೇಳಿದ್ದಾರೆ ಅವರ ಮುಂದಿನ ಟಾರ್ಗೆಟ್ ಬಿಜೆಪಿ ಯಾಗಿರುತ್ತದೆ ಎಂದರು.

ಪ್ರಜಾಪ್ರಭುತ್ವದ ಹಬ್ಬದಂದು ಕುಟುಂಬ ಸಮೇತರಾಗಿ ಹುಟ್ಟೂರಿನಲ್ಲಿ ಮತದಾನ ಮಾಡಿದ್ದು ಈ ಊರಿನಿಂದ ಒಬ್ಬ ಮಗನನ್ನು 8 ಬಾರಿ ವಿಧಾನಸಭೆಗೆ, ಮತ್ತೊಬ್ಬ ಮಗನನ್ನು ಮೂರು ಬಾರಿ ಸಂಸತ್ತಿಗೆ ಕಳುಹಿಸಿದ್ದಾರೆ. ನಾವೂ ಸಹ ಜನರ ಸೇವೆ ಮಾಡಿದ್ದೇವೆ ರಾಜ್ಯದಲ್ಲಿ ನಮ್ಮ ಪಕ್ಷದ ಪರವಾಗಿ ಒಳ್ಳೆಯ ವಾತಾವರಣವಿದ್ದು ನಾವು ಕೊಟ್ಟ ಮಾತು ಉಳಿಸಿಕೊಂಡಿರುವ ಪರಿಣಾಮ ಜನರಿಗೆ ನಮ್ಮ ಮೇಲೆ ನಂಬಿಕೆ ಇದ್ದು ಡಿ.ಕೆ. ಸುರೇಶ್ ವರು ಹೆಚ್ಚಿನ ಮತಗಳ ಅಂತರದಲ್ಲಿ ಗೆಲ್ಲಲಿದ್ದಾರೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು.

ರಾಜ್ಯದಲ್ಲಿ ನಮ್ಮ ಪಕ್ಷ10ಕ್ಕಿಂತ ಹೆಚ್ಚು ಸೀಟು ಗೆಲ್ಲಲಿದೆ. ಬಿಜೆಪಿ ಕೇವಲ ಸುಳ್ಳು ಭರವಸೆ ನೀಡುತ್ತಾ ಬಂದಿದ್ದು ಪ್ರಧಾನ ಮಂತ್ರಿಗಳು ರಾಜ್ಯಕ್ಕೆ ಬಂದರೂ ಯಾವುದೇ ನೆರವು ನೀಡಿಲ್ಲ. ನಾವು ರಾಜ್ಯದ ಹಿತಕ್ಕಾಗಿ ಹೋರಾಟ ಮಾಡಿದ್ದು, ಜನ ಬೆಂಬಲಿಸುವ ವಿಶ್ವಾಸವಿದೆ. ನಮ್ಮ ದೇಶ ದಲ್ಲಿ ಉತ್ತಮ ಸಂವಿಧಾನವಿದ್ದು, ಸಂವಿಧಾನದ ಆಶಯ ದಂತೆ ಎಲ್ಲಾ ವರ್ಗದ ಜನರನ್ನು ಸಮಾನವಾಗಿ ಕಾಣ ಲಾಗುವುದು ಇದೇ ಮೇಳೆ ತಿಳಿಸಿದರು.

ಹೆಚ್ಡಿಕೆ ವಿರುದ್ಧ ಡಿಕೆಶಿ ವಾಗ್ದಾಳಿ: ನಾವು ಐದು ಗ್ಯಾರಂಟಿ ಕೊಟ್ಟು ಜನರ ಬಳಿ ಮತ ಕೇಳುತ್ತಿದ್ದು ಬಿಜೆಪಿ-ಜೆಡಿಎಸ್ ನವರು ಸಹ ಗ್ಯಾರಂಟಿ ಯೋಜನೆಯ ಲಾಭ' ಪಡೆಯುತ್ತಿದ್ದಾರೆ, ಕುಮಾರಸ್ವಾಮಿ ತೋಟದ ಮನೆಯಲ್ಲಿ ಕೆಲಸ ಮಾಡುವವರು, ಡ್ರೈವರ್ ಗಳು ಗ್ಯಾರಂಟಿ ಪಡೆಯುತ್ತಿದ್ದು ಅವರೂ ಕಾಂಗ್ರೆಸ್ ಗೆ ಮತ ಹಾಕಲಿದ್ದಾರೆ,ಐಟ, ಇಡಿ ಮೂಲಕ ನಮ್ಮವರಿಗೆ ಕಿರುಕುಳ ಕೊಡುತ್ತಿದ್ದು ಚುನಾವಣೆ ಮುಗಿದ ಮೇಲೆ ನಾನೆ ಹೋಗಿ ಇದರ ಬಗ್ಗೆ ವಿವರಣೆ ಪಡೆಯಲಿದ್ದೇನೆ, ಮಾಜಿ ಪ್ರಧಾನಿ ದೇವೇಗೌಡರು ಚುನಾವಣೆ ಆದಮೇಲೆ ಬಿಜೆಪಿ ವಿರುದ್ಧವೇ ಮಾತನಾಡಲಿದ್ದಾರೆ, ಈಗಾಗಲೇ ಸುಮಲತಾ ಹಾಗೂ ಪ್ರೀತಂ ಗೌಡ ನಮಗೆ ಸಹಕಾರ ನೀಡುತ್ತಿಲ್ಲ ಎಂದು ಹೇಳಿದ್ದು ಚುನಾವಣೆ ಮುಗಿದ ಮೇಲೆ ಬಿಜೆಪಿ ವಿರುದ್ಧ ಮಾತನಾಡುತ್ತಾರೆ ಕಾದು ನೋಡಿರಿ ಎಂದರು.

ಮಹದೇಶ್ವರ ಬೆಟ್ಟದಲ್ಲಿ ಶಾಂತಿಯುತ ಪ್ರತಿಭಟನೆ

ಚಾಮರಾಜನಗರ: ಹನೂರು ತಾಲೂಕಿನ ಮೆಂದಾರೆ ಗ್ರಾಮದ ಬುಡಕಟ್ಟು ಜನರಿಗೆ ಪಟ್ಟ ಭದ್ರ ಹಿತಾಶಕ್ತಿಗಳು ದೌರ್ಜನ್ಯ ಎಸಗಿದ್ದಾರೆ ನಮ್ಮ ಹಕ್ಕುಗಳನ್ನು ಕಸಿದಿದ್ದಾರೆ ಎಂದು ಸೋಲಿಗ ಅಭಿವೃದ್ಧಿ ಸಂಘದ ವತಿಯಿಂದ ಶನಿವಾರ ಮಹದೇಶ್ವರ ಬೆಟ್ಟದಲ್ಲಿ ಶಾಂತಿಯುತ ಪ್ರತಿಭಟನೆ ನಡೆಸಿದರು.

ತಾಲೂಕಿನ ಮಹದೇಶ್ವರ ಬೆಟ್ಟದಲ್ಲಿ ಸೋಲಿಗ ಅಭಿವೃದ್ಧಿ ಸಂಘದ ಸದಸ್ಯರು ಮಹದೇಶ್ವರ ಬೆಟ್ಟ ಬಸ್ ನಿಲ್ದಾಣದಿಂದ ಪೊಲೀಸ್ ಠಾಣೆಯವರೆಗೆ ಮೆರವಣಿಗೆ ಮೂಲಕ ಶಾಂತಿಯುತ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಬಳಿಕ ಮಾತನಾಡಿದ ಸೋಲಿಗ ಅಭಿವೃದ್ಧಿ ಸಂಘದ ಅಧ್ಯಕ್ಷ ದೊಡ್ಡಸಿದ್ದ ಮಾತನಾಡಿ ಮೆಂದಾರೆ ಗ್ರಾಮದ ಜನರಿಗೆ ಶುಕ್ರವಾರ ಮತದಾನ ಮಾಡಲು ಇಂಡಿಗನತ್ತ ಬೂತ್ ಗೆ ತೆರಳಲು ಸಂದರ್ಭದಲ್ಲಿ ಮತ ಹಾಕಬಾರದು ಎಂದು ಬುಡಕಟ್ಟು ಜನಾಂಗರೇತರ ಜನರು ಕಲ್ಲು ಗಳಿಂದ ಒಡೆದು ಗಾಯಗೊಳಿಸಿದ್ದಾರೆ ಇದರಿಂದ ಮೆಂದಾರೆ ಗ್ರಾಮದ ಸಣ್ಣಪ್ಪಿ ಹಾಗೂ



ಮಾದಯ್ಯಶಿವಕುಮಾರ್ , ಪಡಗಲ ಹಾಗೂ ಸಣ್ಣ ಮಗುವಿಗೂ ತೀವ್ರ ತರದ ನೋವು ಉಂಟಾಗಿದ್ದು ಸಾವು ನೋವಿನ ನಡುವೆ ಹೋರಾಟ ಮಾಡುತ್ತಿದ್ದಾರೆ,ಅಲ್ಲದೇ ಅವರು ವಿಕಲಚೇತನರಾಗುವ ಸಾಧ್ಯತೆ ಇದೆ ಜೊತೆಗೆ ಹಲ್ಲೆ ನಡೆಸಿದವರು ಜಾತಿ ನಿಂದನೆ ಮಾಡಿ ಅವ್ಯಾಚ್ಯ ಶಬ್ದಗಳನ್ನು ಆಡಿದ್ದು ದೌರ್ಜನ್ಯ ಎಸಗಿದ್ದಾರೆ ಹಾಗಾಗಿ ಬುಡಕಟ್ಟು ಜನರು ಭಯಭೀತರಾಗಿದ್ದು ಅವರಿಗೆ ರಕ್ಷಣೆ ನೀಡಬೇಕು ಎಂದು ಮನವಿಯನ್ನು ಸಲ್ಲಿಸಿದ್ದಾರೆ.

ದೂರು ದಾಖಲು : ಲೋಕಸಭಾ ಚುನಾವಣೆಯ ದಿನ ಶುಕ್ರವಾರ ನಡೆದ ಘಟನೆ ಸಂಬಂಧ ಪಟ್ಟಂತೆ ಮತದಾನದ ಹಕ್ಕನ್ನು ಕಿತ್ತುಕೊಂಡ ಜೊತೆಗೆ ಬುಡಕಟ್ಟು ಜನರ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಸೋಲಿಗ ಅಭಿವೃದ್ಧಿ ಸಂಘ ಹನೂರು ಇವರ ವತಿಯಿಂದ ಪ್ರತಿಭಟನೆ ಮೂಲಕ ಮಹದೇಶ್ವರ ಬೆಟ್ಟದ ಪೊಲೀಸ್ ಠಾಣೆಗೆ ತೆರಳಿ ಪೊಲೀಸ್ ಅಧಿಕಾರಿಗಳಿಗೆ ದೂರು ಸಹ ಸಲ್ಲಿಸಿದ್ದಾರೆ.

ಘಟನೆಯ ವಿವರ : ಶುಕ್ರವಾರ ಲೋಕಸಭಾ ಚುನಾವಣೆ ಹಿನ್ನಲೆ ಇಂಡಿಗನತ್ತ ಮೆಂದಾರೆ ಸೇರಿದಂತೆ 5 ಗ್ರಾಮಗಳ ಗ್ರಾಮಸ್ಥರು ಚುನಾವಣೆ ಬಹಿಷ್ಕಾರ ಮಾಡಲು ನಿರ್ಧಾರ ಮಾಡಿದ್ದರು ಅದರಂತರ ಮದ್ಯಾಹ್ನವಾದರೂ ಸಹ ಮತಗಟ್ಟೆಯತ್ತ ತೆರಳದ ಜನರ ಮನವೊಲಿಸಲು ಅಧಿಕಾರಿಗಳ ತಂಡ ಗ್ರಾಮಕ್ಕೆ ತೆರಳಿ ಕೊನೆಗೆ ಮೆಂದಾರೆ ಗ್ರಾಮದ 50 ಕ್ಕು ಹೆಚ್ಚು ಜನರನ್ನು ಮನವೊಲಿಸಿ ಮತ ಹಾಕಲು ಕರೆತಂದಿದ್ದರು ಇಲ್ಲಿ ಇಂಡಿಗನತ್ತ ಹಾಗೂ ಮೆಂದಾರೆ ಗ್ರಾಮಸ್ಥರ ನಡುವೆ ಮಾತಿನ ಚಕಮುಖಿ ನಡೆಯುವ ಸಂದರ್ಭದಲ್ಲಿ ಪೊಲೀಸರು ಲಘು ಲಾಠಿ ಪ್ರಹಾರ ನಡೆಸಲು ಮುಂದಾದಗ ಇಂಡಿಗನತ್ತ ಗ್ರಾಮಸ್ಥರು ಕಲ್ಲು ತೂರಾಟ ನಡೆಸಿದರು ಆ ಸಂದರ್ಭದಲ್ಲಿ ಮೆಂದಾರೆ ಗ್ರಾಮಸ್ಥರು ಸೇರಿದಂತೆ ಅಧಿಕಾರಿಗಳಿಗೂ ಸಹ ಕಲ್ಲೇಟು ಬಿದ್ದು ಸುಮಾರು ಮಹದೇಶ್ವರ ಬೆಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ಪಡೆದಿದ್ದರು. ಪ್ರತಿಭಟನೆ ವೇಳೆ ಸೋಲಿಗ ಅಭಿವೃದ್ಧಿ ಸಂಘದ ಅಧ್ಯಕ್ಷ ದೊಡ್ಡ ಸಿದ್ದ , ಮುತ್ತಯ್ಯ, ಮಹದೇವಸ್ವಾಮಿ, ಮಹದೇವ್ ಸಿ, ಯು ರಂಗೇ ಗೌಡ, ಗಿರಿಯಿ, ಸಿ ಮಹದೇಗೌಡ್ರು ಜಿಲ್ಲಾ ಕಾರ್ಯದರ್ಶಿ, ಎ ರಂಗೇ ಗೌಡ ಸೇರಿದಂತೆ ಇನ್ನು ಅನೇಕರು ಭಾಗವಹಿಸಿದ್ದರು.

ಮೈತ್ರಿಕೂಟ ಅಧಿಕಾರದ ಚುಕ್ಕಾಣಿ ಹಿಡಿಯುವುದು ಗ್ಯಾರಂಟಿ: ಡಿಕೆಶಿ

■ ಕಾಯಕಯೋಗಿ ಸುದ್ದಿ



ಕನಕಪುರ: ಪ್ರಸಕ್ತ ಲೋಕಸಭಾ ಚುನಾವಣೆ ಬಳಿಕ ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಇಂಡಿ ಮೈತ್ರಿಕೂಟ ಅಧಿಕಾರದ ಚುಕ್ಕಾಣಿ ಹಿಡಿಯುವುದು ಗ್ಯಾರಂಟಿ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

ಲೋಕಸಭಾ ಚುನಾವಣೆಯ ಮೊದಲ ಹಂತದ ಚುನಾವಣೆಯಲ್ಲಿ ಸ್ವಗ್ರಾಮ ಕನಕಪುರ ತಾಲೂಕಿನ ದೊಡ್ಡಾಲಹಳ್ಳಿ ಮತಗಟ್ಟೆಗೆ ಆಗಮಿಸಿ ಮತದಾನ ಮಾಡಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಜಾಪ್ರಭುತ್ವದ ಹಬ್ಬದ ದಿನವಾದ ಶುಕ್ರವಾರ ನಾನು ನನ್ನ ಸಹೋದರ ಸೇರಿ ವ ಕುಟುಂಬ ಸಮೇತರಾಗಿ ನನ್ನ ಹುಟ್ಟೂರು ದೊಡ್ಡಆಲಹಳ್ಳಿಯಲ್ಲಿ ನಮ್ಮ ಹಕ್ಕು ಚಲಾಯಿಸಿದ್ದೇವೆ. ಈ ಚುನಾವಣೆಯಲ್ಲದೆ ಚುನಾವಣೆಗಳಲ್ಲೂ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಕರ್ತವ್ಯ ಸಾರ್ಥಕಪಡಿಸಿ ಎಂದು ತಿಳಿಸಿದರು. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ನನ್ನ ಸಹೋದರ ಡಿ.ಕೆ. ಸುರೇಶ್ ಗೆಲುವು ಖಚಿತವಾಗಿದೆ. ಕಾಂಗ್ರೆಸ್‌ಗೆ ಸಂಪೂರ್ಣ ಆಶೀರ್ವಾದ ಮಾಡಿ, ರಾಜ್ಯದಲ್ಲಿ ಈ ಬಾರಿ ಮೋದಿ ಅಲೆ ಇಲ್ಲ ಎಂಬುದನ್ನು ಸಾಬೀತುಪಡಿಸಲಿದ್ದಾರೆ. ಕಾಂಗ್ರೆಸ್‌ನ ಜನಪರ ಯೋಜನೆಗಳಿಂದ ಮಹಿಳೆಯರು, ಹಿಂದುಳಿದ, ಶಕ್ತಿ ಅಲ್ಪಸಂಖ್ಯಾತರು ಸೇರಿ ಎಲ್ಲ ಸಮುದಾಯದ ಜನರು ಕಾಂಗ್ರೆಸ್ ಪರವಾಗಿ ಮತ ಚಲಾಯಿಸಿರುವುದರಿಂದ, ರಾಜ್ಯದಲ್ಲಿ ಕಾಂಗ್ರೆಸ್ ಕನಿಷ್ಠ ಹದಿನಾಲ್ಕು ಲೋಕಸಭಾ ಕ್ಷೇತ್ರಗಳಲ್ಲಿ ಜಯಭೇರಿ ಬಾರಿಸಲಿದೆ ಎಂದರು. ಸಂಸದ ಡಿ.ಕೆ.ಸುರೇಶ್ ಸೇರಿ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ವಿಜೃಂಭಣೆಯ ಆಂಜನೇಯ ಉತ್ಸವ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: – ಚಾಮರಾಜನಗರ: ನಗರದ ಶಂಕರಪುರ ಬಡಾವಣೆಯ ಶ್ರೀರಾಮ ಮಂದಿರದಲ್ಲಿ ಶ್ರೀ ರಾಮನವಮಿ ಪಟ್ಟಾಭಿಷೇಕದ ಅಂಗವಾಗಿ ವಿಜೃಂಭಣೆಯಿಂದ ಆಂಜನೇಯ ಉತ್ಸವ ಮತ್ತು ಓಕಳಿ ಕಾರ್ಯಕ್ರಮ ಜರುಗಿತು.

ಶ್ರೀ ರಾಮ ಮಂದಿರದ ಮುಂಭಾಗ ಹಾಗೂ ಶಂಕರಪುರ ಬಡಾವಣೆಯ ರಸ್ತೆಯಲ್ಲಿ ಮನೆಮನೆಯ ಮುಂಭಾಗ ಶುದ್ಧ ಬಣ್ಣದ ನೀರನ್ನು ಪರಸ್ಪರ ಎರಚುವ ಮೂಲಕ ಶ್ರೀ ಆಂಜನೇಯ ಓಕಳಿ ಕಾರ್ಯಕ್ರಮವು ವೈಭವದಿಂದ ಜರಗಿತು.

ಅರಿಶಿನ ,ಕುಂಕುಮ, ಶ್ರೀಗಂಧ ಪನ್ನೀರು ,ತುಳಸಿ, ದಾಸಿವಾಳ, ಬೇವಿನ ಎಲೆ ,ಮಾವಿನ ಎಲೆ, ಪಾರಿಜಾತ ಎಲೆ, ಸೀಬೆ ಎಲೆ ,ಮಲ್ಲಿಗೆ ಎಲೆ ಮುಂತಾದ ಪರಿಸರ ಯುಕ್ತ ಎಲೆಗಳ ರಸ ಹಾಗೂ ಶುದ್ಧ ಬಣ್ಣದ ಓಕಳಿ ನೀರನ್ನು ತಯಾರಿಸಿ ಪ್ರತಿ ಮನೆಗಳಲ್ಲೂ ಪರಸ್ಪರ ವಯೋಮಾನ ಭೇದವಿಲ್ಲದೆ ಪರಸ್ಪರ ಎರಚಿ ಸಂಭ್ರಮದಿಂದ ಓಕಳಿಯ ಕಾರ್ಯಕ್ರಮ ನೋಡುಗರಿಗೆ ಹಾಗೂ ಭಾಗವಹಿಸಿದವರಿಗೆ ಪರಮಾನಂದವನ್ನು ಉಂಟುಮಾಡುತ್ತದೆ.

ಓಕಳಿ ಕಾರ್ಯಕ್ರಮದ ಕುರಿತು ಮಾತನಾಡಿದ ಸಂಸ್ಕೃತಿ ಚಿಂತಕ ಸುರೇಶ ಎನ್ ಋಗ್ವೇದಿ ಮಾತನಾಡಿ ಶಂಕರ ಪುರ ಶ್ರೀರಾಮ ಮಂದಿರದಲ್ಲಿ ಏಳು ದಶಕಗಳಿಂದಲೂ ನಿರಂತರವಾಗಿ ಶ್ರೀ ರಾಮನ ಉತ್ಸವ ನಡೆಯುತ್ತಿದ್ದು 10 ದಿನಗಳ ಕಾಲ ನಡೆಯುವ ಶ್ರೀರಾಮ ಉತ್ಸವ ಅಂಗವಾಗಿ ಕೊನೆಯ ದಿನ ಆಂಜನೇಯ ಉತ್ಸವ ಪ್ರತಿ ಮನೆಮನೆಗಳಲ್ಲೂ ಆಂಜನೇಯನ ಮೆರವಣಿಗೆ ಹೋಗಿ ಪ್ರತಿ ಮನೆಯಲ್ಲಿ ವಿಶೇಷ ಪೂಜೆ ನೆರವೇರಿಸಿ ಕಾಣಿಕೆಗಳನ್ನು ಸ್ವೀಕರಿಸಿ ಶ್ರೀರಾಮ ಮಂದಿರಕ್ಕೆ ತೆರಳಿದ ನಂತರ ವಿಶೇಷವಾಗಿ ಓಕಳಿ ಕಾರ್ಯಕ್ರಮ ನಡೆಯುತ್ತದೆ. ನಮ್ಮ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಯುವ ಪೀಳಿಗೆ ಪರಸ್ಪರ ಭಾವೈಕ್ಯತೆ ಏಕತೆ ,ಪ್ರೀತಿ ,ವಿಶ್ವಾಸ ,ನಂಬಿಕೆ ಆಧ್ಯಾತ್ಮಿಕ ಭಾವನೆ ಹಾಗೂ ಭಗವಂತನಲ್ಲಿ ದೃಢವಾದ ವಿಶ್ವಾಸ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮವಾದ ಓಕಳಿ ಪರಂಪರೆಯನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಮಾಡಬೇಕಾಗಿದೆ ಎಂದು ಸಂಘ ಸಂಸ್ಥೆಗಳಲ್ಲಿ ಸೇರಿ ಸುಮಾರು ಐದಾರು ಲಕ್ಷ ರೂಪಾಯಿಗಳನ್ನು ಸಾಲ ಮಾಡಿದ್ದರು. ಬರಗಾಲದ ಹಿನ್ನೆಲೆಯಲ್ಲಿ ಕೊಳವೆ ಬಾವಿಯ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-6
28-04-2024
ಬೆಂಗಳೂರು

ಏ.28 ಕುರುಕ್ಷೇತ್ರ ನಾಟಕ ಪ್ರದರ್ಶನ

ವಿಜಯಪುರ: ಹೊಂಬಳಿಯ ಹುರುಳುಗುರ್ಕಿ ಗ್ರಾಮದಲ್ಲಿ ಏಪ್ರಿಲ್ 28ರ ಭಾನುವಾರ ರಾತ್ರಿ 9:00 ಕ್ಕೆ ಶ್ರೀರಂಗನಾಥ ಸ್ವಾಮಿ ಕೃಪಾಪೋಷಿತ ನಾಟಕ ಮಂಡಳಿ ವತಿಯಿಂದ ಕುರುಕ್ಷೇತ್ರ ಅಥವಾ ಶ್ರೀ ಕೃಷ್ಣ ಸಂಧಾನ ನಾಟಕವನ್ನು ಏರ್ಪಡಿಸಲಾಗಿದೆ ಎಂದು ವೆಂಕಟಗಿರಿಕೋಟೆ ಗ್ರಾಮ ಪಂಚಾಯಿತಿ ಸದಸ್ಯರಾದ ಹುರುಳುಗುರ್ಕಿ ಎಚ್. ಶ್ರೀನಿವಾಸ್ ತಿಳಿಸಿದರು.

ಶ್ರೀನಿವಾಸ್ ರವರು ಮಾತನಾಡುತ್ತಾ, ಮಾತಿಗೆ ಬೆಲೆ ಮನುಷ್ಯನಿಗೆ ಕಲೆ ಎನ್ನುವ ಹಾಗೆ ನಾಟಕ ಜೀವನ ಒಂದು ಕಲೆಯಾಗಿದ್ದು, ಹುರುಳುಗುರ್ಕಿ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ನಾಟಕಕ್ಕೆ ಆಗಮಿಸುವ ಮೂಲಕ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ತಿಳಿಸಿದರು.

ಕುರುಕ್ಷೇತ್ರ ನಾಟಕವನ್ನು ಮಾಜಿ ಸಚಿವ ಕೆ ಸುಧಾಕರ್ ರವರು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಯಲಹಂಕ ಶಾಸಕರಾದ ಎಸ್ ಆರ್ ವಿಶ್ವನಾಥ್, ಮಾಜಿ ಶಾಸಕರುಗಳಾದ ನಿಸರ್ಗ ನಾರಾಯಣಸ್ವಾಮಿ, ಜಿ ಚಿಂದ್ರಣ್ಣ, ಪಿಳ್ಳ ಮುನಿಶ್ಯಾಮಪ್ಪ, ಅವತಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಎಂ. ಶಾಂತ್ ಕುಮಾರ್ ಭಾಗವಹಿಸಲಿರುವರು.

ನಾಟಕದ ನಿರ್ದೇಶನವನ್ನು ಹುರಳುಗುರ್ಕಿ ಗ್ರಾಮದ ಸಂಗೀತ ನಿರ್ದೇಶಕರಾದ ವಿ.ಶ್ರೀನಿವಾಸರವರು ನಿರ್ದೇಶಿಸಲಿದ್ದು, ಶ್ರೀ ಕೃಷ್ಣನಾಗಿ ಎಚ್ ಎಂ ಮುನಿನಾರಾಯಣಪ್ಪ, ಧರ್ಮರಾಯನಾಗಿ ದೊಡ್ಡನಾರಾಯಣಪ್ಪ, ಭೀಮನಾಗಿ ಎನ್ ವಿಜಯ್ ಕುಮಾರ್, ಬಲರಾಮನಾಗಿ ಶರಣ್ ರಾಜ್, ದುರ್ಯೋಧನನಾಗಿ ಎ. ನಾರಾಯಣಪ್ಪ, ದುಶ್ಯಾಸನನಾಗಿ ಎಂ ಆನಂದ್ ಕುಮಾರ್, ಅಭಿಮನ್ಯುವಾಗಿ ಎಚ್.ಸಿ ಕೃಷ್ಣಮೂರ್ತಿ, ಕರ್ಣನಾಗಿ ಹನುಮಂತಪ್ಪ, ವಿದುರನಾಗಿ ಶ್ರೀ ಗೋವಿಂದರಾಜ್, ಶಕುನಿಯಾಗಿ ಬಿ.ಚಿನ್ನಪ್ಪ, ದ್ರೌಪದಿ ಹಾಗೂ ಸುಭದ್ರೆಯಾಗಿ ಭಾಗ್ಯಶ್ರೀ, ಕುಂತಿ ಹಾಗೂ ಗಾಂಧಾರಿ ಪಾತ್ರಗಳಲ್ಲಿ ಪವಿತ್ರ, ರುಕ್ಮಿಣಿಯಾಗಿ ಗೀತ ಮಾಧುರಿ, ಉತ್ತರೆ ಯಾಗಿ ಕವಿತಾ ನಟಿಸಲಿದ್ದು, ಶ್ರೀನಿವಾಸ್ ತಬಲವನ್ನು, ಪದ್ಮರಾಜ್ ಕ್ಯಾಸಿಯೋ ನುಡಿಸಲಿರುವರು.

ಮಲೇರಿಯಾ ವಿರುದ್ಧದ ಹೋರಾಟವನ್ನು ತೀವ್ರಗೊಳಿಸುವ ಮೂಲಕ ಹೆಚ್ಚು ಸಮಾಧಾನತೆ ಜಗತ್ತಿನಲ್ಲಿ ಸಾರೋಣ

■ ಕಾಯಕಯೋಗಿ ಸುದ್ದಿ

ವಿಜಯಪುರ ದೇಶದಲ್ಲಿ 2025ರ ವೇಳೆಗೆ ಮಲೇರಿಯ ಸಂಪೂರ್ಣ ನಿವಾರಣೆ ಗುರಿಯನ್ನು ಸಾಧಿಸುವ ಸಲುವಾಗಿ 2024ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಹೆಚ್ಚು ಸಮಾನತೆಯ ಜಗತ್ತಿಗೆ ಮಲೇರಿಯಾ ವಿರುದ್ಧ ಹೋರಾಟವನ್ನು ತೀವ್ರಗೊಳಿಸೋಣ ಎಂಬ ಘೋಷವಾಕ್ಯ ಬಿಡುಗಡೆಗೊಳಿಸಲಾಗಿದೆ ಎಂದು ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದ ವೈದ್ಯರಾದ ಡಾಕ್ಟರ್ ರಮ್ಯಶ್ರೀರವರು ತಿಳಿಸಿದರು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಲ್ಲಿ ಮಲೇರಿಯಾ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಏರ್ಪಡಿಸಿದ್ದ ವಿಶ್ವ



ಮಲೇರಿಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಅನಾಫಿಲಿಸ್ ಸೊಳ್ಳೆಗಳಿಂದ ಮಲೇರಿಯ ರೋಗ ಹರಡುತ್ತಿದ್ದು ಇದರಿಂದ ರಕ್ಷಣೆ ಪಡೆಯುವ ಸಲುವಾಗಿ ಪ್ರತಿಯೊಬ್ಬರು ಮಲಗುವಾಗ ಸೊಳ್ಳೆ ಪರದೆ ಬಳಸುವುದು ಒಳಾಂಗಣ ಕೀಟನಾಶಕ ಸಿಂಪರಣೆ ನಿಗದಿತವಾಗಿ ಮಾಡುವುದು ಲಾರ್ವಹಾರಿ ಮೀನುಗಳನ್ನು ಬಿಡುವುದು ಕಿಟಕಿ ಮತ್ತು ಬಾಗಿಲುಗಳಿಗೆ ಕ್ರಮಗಳಿಂದ ಸೊಳ್ಳೆಗಳನ್ನು ನಿಯಂತ್ರಿಸಬಹುದಾಗಿದೆ ಎಂದು ತಿಳಿಸಿದರು.

ಮತ್ತೊಬ್ಬ ವೈದ್ಯರಾದ ಡಾ. ರಶ್ಮಿರವರು ಮಾತನಾಡಿ ಅನಾಫಿಲಿಸ್ ಸೊಳ್ಳೆಗಳು ಶುದ್ಧ ನೀರು ಇರುವ ಜಾಗಗಳಲ್ಲಿ ಹೆಚ್ಚು ಉತ್ಪತ್ತಿಯಾಗುತ್ತದೆ ಇವು ಕುಂಟೆ ಕೆರೆ ಜೋಕು ಪ್ರದೇಶ ಓವರ್ ಹೆಡ್ ಟ್ಯಾಂಕ್ ಬಾವಿ ಕಲ್ಲಿನ ಕ್ವಾರಿ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳು ತೆಂಗಿನ ಚಿಪ್ಪುಗಳು ಹೆಚ್ಚು ಉತ್ಪತ್ತಿಯಾಗುವ ಸಂಭವವಿರುತ್ತದೆ ಎಂದು ಯಾರಿಗೆ ಆದರೂ ಚಳಿ ಜ್ವರ ನಡುಕ ತಲೆನೋವು ವಾಕರಿಕೆ ವಾಂತಿ ಸ್ನಾಯು ನೋವು ಮುಂತಾದ ಲಕ್ಷಣಗಳು ಕಂಡುಬಂದಲ್ಲಿ ಕೂಡಲೇ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು ತಿಳಿಸಿದರು ಈ ಸಂದರ್ಭದಲ್ಲಿ ವೈದ್ಯರುಗಳಾದ ಡಾ. ರಮೇಶ್ ಡಾ. ಶ್ರೀಧರ್ ಡಾ. ಉದಯ್ ಹಿರಿಯ ಆರೋಗ್ಯ ಸಹಾಯಕರುಗಳಾದ ಸುನೀತ ನಯನ ಅರುಂಧತಿ ಲ್ಯಾಬ್ ಟೆಕ್ನೀಷಿಯನ್ ಮಂಜುನಾಥ್ ಆಸ್ಪತ್ರೆಯ ಸಹಾಯಕ ಸಿಬ್ಬಂದಿ ವರ್ಗದ ವರ್ಗದ ಕಲಾವತಿ ವರಲಕ್ಷ್ಮಿ ಪೃಥ್ವಿರಾಜ್ ಲೋಕೇಶ್ ಮಂಜು ರತ್ನಮ್ಮ ಮತ್ತಿತರರು ಉಪಸ್ಥಿತರಿದ್ದರು

ಕನ್ನಡ ನಾಡಿಗೆ ಡಾ. ರಾಜ್ ಕುಮಾರ್ ಕೊಡುಗೆ ಅಪಾರ : ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಿಎನ್ ಕೃಷ್ಣಪ್ಪ



ದೇವನಹಳ್ಳಿ : ಕನ್ನಡ ಚಿತ್ರ ರಂಗದಲ್ಲಿ ಡಾ. ರಾಜ್ ಕುಮಾರ್ ಮೇರು ಕಲಾವಿದರು. ಅವರಿಗೆ ಕನ್ನಡ ಭಾಷೆಯ ಮೇಲೆ ಅಪಾರ ಪ್ರೀತಿ ಗೌರವ ಇತ್ತು. ಅವರು ಚಿತ್ರ ರಂಗದಲ್ಲಿ ಅದ್ಭುತ ನಟರಾಗಿ ಕಲಾವಿದರಾಗಿ ಬೆಳೆಯಲು ಸಾಧ್ಯವಾಯಿತು. ಇಂದಿನ ಯುವ ಪೀಳಿಗೆಯ ನಟರೂ ಸಹ ರಾಜ್ ರ ಆದರ್ಶ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಿಎನ್ ಕೃಷ್ಣಪ್ಪ ತಿಳಿಸಿದರು.

ಪಟ್ಟಣದ ಮರಳುಬಾಗಿಲು ಪರ್ವತಪುರ ರಸ್ತೆಯಲ್ಲಿರುವ ಜಿಲ್ಲಾ ಕೋಶಾಧ್ಯಕ್ಷರಾದ, ಡಾ.ಮುನಿರಾಜು(ಅಪ್ಪಯ್ಯಣ್ಣ) ಇವರ ಕಚೇರಿಯಲ್ಲಿ ಜಿಲ್ಲಾ ಮತ್ತು ತಾಲೂಕುಗಳ ಸಾಹಿತ್ಯ ಪರಿಷತ್ ವತಿಯಿಂದ ಹಮ್ಮಿಕೊಂಡಿದ್ದ ಚಿತ್ರನಟ ಪದ್ಮಭೂಷಣ ಡಾ. ರಾಜಕುಮಾರ್ ಅವರ ಜನ್ಮ ದಿನೋತ್ಸವ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಡಾ. ರಾಜ್ ಕುಮಾರ್ ಕನ್ನಡ ನಾಡಿಗೆ ಸಲ್ಲಿಸಿದ ಸೇವೆ ಅವಿಸ್ಮರಣೀಯವಾದದ್ದು ಅವರ ಚಿತ್ರಗಳಲ್ಲಿನ ಅಭಿನಯಕ್ಕೆ ಮಾರು ಹೋಗಿ ಅಡ್ಡದಾರಿ ಹಿಡಿದ ಎಷ್ಟೋ ಮಂದಿ ಸರಿ ದಾರಿಗೆ ಬಂದಿದೆ. ಅವರ ಹೆಸರು ಕನ್ನಡ ನಾಡಿನಲ್ಲಿ ಶಾಶ್ವತವಾಗಿ ಉಳಿಯಬೇಕು. ಕನ್ನಡ ಭಾಷೆ, ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಬಿಎಳೆಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಕೋಶಾಧ್ಯಕ್ಷ ಅಪ್ಪಯ್ಯ (ಮುನಿರಾಜು) ಸಾಹಿತಿ ಗಳಿಂದ ಶರಣಯ್ಯ ಹಿರೇಮಠ, ಸಂಪತ್ ಕುರ್ಮಾ, ಪದಾಽಕಾರಿಗಳಾದ ಎನ್. ಚಿಂದ್ರಶೇಖರ್,ಸಂಘಟನಾ ಕಾರ್ಯದರ್ಶಿ, ವಿನೋದ್ ಕುರ್ಮಾ, ತಾಲೂಕು ಗೌರವ ಕಾರ್ಯದರ್ಶಿ, ಯಲಿಯೂರು ದೇವರಾಜ್, ನಗರ ಘಟಕದ ಗೌರವಕಾರ್ಯದರ್ಶಿ, ಮಧುಸೂದನ್,ಐಬಸಾಪುರದ ರಾಮಾಂಜಿನಪ್ಪ, ತಾಲೂಕು ಘಟಕದ ಕೋಶಾಧ್ಯಕ್ಷ ಜೊನ್ನಹಳ್ಳಿ ರಾಮಾಂಜನಪ್ಪನಗರಘಟಕದ ಕೋಶಾಧ್ಯಕ್ಷ ಪುನೀತ್ ಕುರ್ಮಾ, ಪದಾಽಕಾರಿಗಳಾದ ಸುರೇಶಾರ್ಜಾ,ವೇಣುಗೋಪಾಲ್, ಕಸಬಾ ಘಟಕದ ಅಧ್ಯಕ್ಷ ಗೋಕರೆಯ ವೇಣು, ಶಿವಕುರ್ಮಾ, ಗಂಗಾರಾಜು, ಮಂಜುನಾಥ್ ಮತ್ತಿತರರು ಇದ್ದರು.

ಈ ವೇಳೆಯಲ್ಲಿ ಚಿನ್ನಹಳ್ಳಿಯ ಸಿ.ಪಿ. ಎನ್. ರೆಡ್ಡಿ ಮಾತನಾಡಿ, ಗಂಧದಗುಡಿಯ ಹಾಡನ್ನು ಹಾಡಿ ಎಲ್ಲರನ್ನು ಮನರಂಜಿಸಿದರು.

ಏ.30ರವರೆಗೆ ಕರಾವಳಿಗರಿಗೆ ಹೀಟ್ ವೇವ್ ಸಂಕಷ್ಟ! ಹೊರಗೆ ಹೋಗದಂತೆ ಸೂಚನೆ ನೀಡಿದ ಐಎಂಡಿ

ಕರಾವಳಿಯಲ್ಲಿ ಏ.30ರವರೆಗೆ ಬಿಸಿಗಾಳಿ ಅಲೆ ಬೀಸಲಿದ್ದು ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಹವಾಮಾನ ಇಲಾಖೆ ಸೂಚನೆ ನೀಡಿದೆ.

ಕರಾವಳಿಯಲ್ಲಿ ಬೇಸಿಗೆಯ ತಾಪಮಾನವು ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದರಿಂದ ಈ ವಿದ್ಯಮಾನ ನಡೆಯುತ್ತಿದ್ದು, ಏ.30ರವರೆಗೆ ಬಿಸಿಗಾಳಿಯ ಅಲೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿ ನೀಡಿದೆ..

ಭಾರತೀಯ ಹವಾಮಾನ ಇಲಾಖೆ ಮುಂದಿನ ಐದು ದಿನಗಳ ಕಾಲ ದ.ಕ. ಉಡುಪಿ ಸಹಿತ ಕರ್ನಾಟಕದ ಒಳನಾಡು ಜಿಲ್ಲೆಗಳಲ್ಲಿ ಬಿಸಿಗಾಳಿ ಅಲೆ ಹೆಚ್ಚಾಗಲಿದೆ ಎಂದು ವರದಿ ಮಾಡಿದೆ. ಈ ಹಿನ್ನೆಲೆಯಲ್ಲಿ ಎಚ್ಚರಿಕೆ ವಹಿಸುವಂತೆ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಎಚ್ಚರಿಸಿದೆ. ಬಿಸಿಗಾಳಿಯಿಂದಾಗಿ ಉಂಟಾಗುವ ಸನ್ ಸ್ಟೋಕ್ ಮುಂತಾದ ಸಮಸ್ಯೆಗಳಿಂದ ಪಾರಾಗಲು ಮಧ್ಯಾಹ್ನ 1 ರಿಂದ ಅಪರಾಹ್ನ 3 ರವರೆಗೆ ಹೊರಗೆ ಹೋಗಬಾರದು, ತೆಳುವಾದ, ಹಗುರವಾದ ಬಟ್ಟೆಗಳನ್ನು ಧರಿಸಬೇಕು. ನಿರ್ಜಲೀಕರಣವಾಗದಂತೆ ತಡೆಯಲು ಆಗಾಗ ನೀರು ಕುಡಿಯುತ್ತಿರಬೇಕು ಎಂದು ಸೂಚನೆ ನೀಡಿದೆ. ದ.ಕ ಜಿಲ್ಲೆಯ ಗರಿಷ್ಠ ತಾಪಮಾನ ಸದ್ಯಕ್ಕೆ ಸ್ಥಿರವಾಗಿದೆ. ಗುರುವಾರ ಈ ಪ್ರಮಾಣ 34 ಡಿಗ್ರಿ ಸೆಲ್ಸಿಯಸ್ ಇದ್ದರೆ, ಶುಕ್ರವಾರ ಗರಿಷ್ಠ 34.1 ಡಿಗ್ರಿ ಸೆಲ್ಸಿಯಸ್, ಕನಿಷ್ಠ 24 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಜಿಲ್ಲೆಯ ಬಹುತೇಕ ಗಡಿ ಭಾಗಗಳಲ್ಲಿ ಸಂಜೆಯಿಂದ ಮೋಡದ ವಾತಾವರಣದ ಮುನ್ಸೂಚನೆ ಇದೆ ಎಂದು ರಾಷ್ಟ್ರೀಯ ಹವಾಮಾನ ಮುನ್ಸೂಚನಾ ಕೇಂದ್ರ ಮಾಹಿತಿ ನೀಡಿದೆ.

ಆಂಜನೇಯ ಸ್ವಾಮಿ ಮತ್ತು ಶಿರಡಿ ಸಾಯಿಬಾಬಾಗೆ ವಿಶೇಷ ಪೂಜೆ



ದೇವನಹಳ್ಳಿ: ದೇವರು ಧ್ಯಾನವನ್ನು ಪ್ರತಿನಿತ್ಯ ಮಾಡಬೇಕು. ಸಕಲ ಜೀವರಾಶಿಗಳು ಶಾಂತಿ ಮತ್ತು ನೆಮ್ಮದಿ ಬದುಕು ನಡೆಸಲೆಂದು ಆಂಜನೇಯ ಸ್ವಾಮಿ ಮತ್ತು ಶಿರಡಿ ಸಾಯಿ ಬಾಬಾ ರವರಲ್ಲಿ ಕೇಳಿಕೊಳ್ಳುತ್ತೇನೆ. ಎಂದುವೀರಾಂಜನೇಯ ಸೇವಾ ಸಮಿತಿಯ ಪದಾಽಕಾರಿ ಸಂತೋಷ್ ತಿಳಿಸಿದರು.

ಪಟ್ಟಣದ ಬೂದಿಗೆರೆ ರಸ್ತೆಯಲ್ಲಿರುವ ಡಿವಿಎಂ ಕಾಲೋನಿಯಲ್ಲಿ ಆಂಜನೇಯ ಸ್ವಾಮಿ ದೇವಾಲಯದ ಆವರಣದಲ್ಲಿ ವೀರಾಂಜನೇಯ ಸೇವಾ ಸಮಿತಿಯ ವತಿಯಿಂದ ಆಂಜನೇಯ ಸ್ವಾಮಿ ಮತ್ತು ಶಿರಡಿ ಸಾಯಿಬಾಬಾ ಗೆ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಮಳೆ ಇಲ್ಲದೆ ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ದೇವರಲ್ಲಿ ಕೇಳಿಕೊಳ್ಳುವುದೇನೆಂದರೆ ಬರಗಾಲವನ್ನು ಹೋಗಲಾಡಿಸಿ ಮಳೆಯನ್ನು ಕರುಣಿಸಲಿ. ರೈತರು ಸುಖ ಸಮೃದ್ಧಿಯ ಜೀವನವನ್ನು ನಡೆಸುವಂತೆ ಆಗಲಿ ಎಂದು ದೇವರಲ್ಲಿ ಪ್ರಾರ್ಥಿಸಿಕೊಳ್ಳುತ್ತಿದ್ದೇವೆ. ನಮ್ಮ ಹಿರಿಯರು ಆಗಿನ ಕಾಲದಲ್ಲಿ ದೇವಾಲಯಗಳನ್ನು ನಿರ್ಮಾಣ ಮಾಡಿ ಪ್ರತಿ ಗ್ರಾಮ ಮತ್ತು ನಗರ ಪ್ರದೇಶದಲ್ಲಿ ಶಾಂತಿ ನೆಮ್ಮದಿ ನೆಲೆಸುವಂತೆ ಮಾಡುತ್ತಿದ್ದರು. ದೇವರನ್ನು ನೆನೆದರೆ ಯಾವುದೇ ಕಷ್ಟಗಳು ಪರಿಹಾರವಾಗುತ್ತದೆ. ಎಂದು ಹೇಳಿದರು.

ಈ ವೇಳೆಯಲ್ಲಿ ಆಂಜನೇಯ ಸ್ವಾಮಿ ದೇವಾಲಯದ ಅರ್ಚಕ ಸತ್ಯಮೂರ್ತಿ, ವೀರಾಂಜನೇಯ ವೀರಾಂಜನೇಯ ಸೇವಾ ಸಮಿತಿಯ ಪದಾಽಕಾರಿಗಳಾದ ಸಂತೋಷ್, ಮುರಳಿ, ಗೋಪಿ, ಕೃಷ್ಣ, ಅಭಿ, ನರೇಂದ್ರ, ಸಮಿತಿಯ ಪದಾಽಕಾರಿಗಳು ಇದ್ದರು.

ಮಹಿಳಾ ಸಂಘದ ವತಿಯಿಂದ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆ.

ವಿಜಯಪುರ: ಪಟ್ಟಣದ ಅಯೋಧ್ಯಾನಗರ ಶಿವಾಜಿರಾ ನಗರ್ತ ಮಹಿಳಾ ಸಂಘದ ವತಿಯಿಂದ ಏಪ್ರಿಲ್ 28ರ ಭಾನುವಾರದಂದು ಸಂಜೆ 4 ಗಂಟೆಗೆ ಶ್ರೀ ನಗರೇಶ್ವರ ಸ್ವಾಮಿ ಪ್ರಾರ್ಥನಾ ಮಂದಿರದಲ್ಲಿ ಅಕ್ಕಮಹಾದೇವಿ ಜಯಂತಿ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಏರ್ಪಡಿಸಲಾಗಿದೆ ಎಂದು ಸಂಘದ ಅಧ್ಯಕ್ಷರಾದ ಲೀಲಾ ವತಿ ರುದ್ರಮೂರ್ತಿ ರವರು ಪ್ರಕಟಣೆಯಲ್ಲಿ ತಿಳಿಸಿರುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಲೀಲಾ ವತಿ ರುದ್ರ ಮೂರ್ತಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಮಿಲೇನಿಯಂ ಶಾಲೆಯ ಸಂಸ್ಥಾಪಕ ಸದಸ್ಯರಾದ ರೂಪ ಶ್ರೀಧರ್ ಭಾಗವಹಿಸಲಿದ್ದು ಕಾರ್ಯಕ್ರಮದಲ್ಲಿ ಕುಮಾರಿ ಅರ್ಪಿತಾ ದಿನೇಶ್ ರವರು ನಾಡಿ ಚಿಕಿತ್ಸೆಯ ಮಹತ್ವವನ್ನು ತಿಳಿಸಲಿರುವರು.

ವಿಜಯಪುರ ಪಟ್ಟಣದ ನಿವಾಸಿ ಕಳೆದ ಸಾಲಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ರಾಜ್ಯಕ್ಕೆ ನಾಲ್ಕನೇ ರ್ಯಾಂಕ್ ಪಡೆದ ಪ್ರೇರಣ ನಾಗರಾಜ್ ವಿದ್ಯಾರ್ಥಿನಿಯನ್ನು ಅಭಿನಂದಿಸಲಿದ್ದು, ಜನಾರ್ದನದ ಮಹಿಳೆಯರಿಗಾಗಿ ಹಲವು ವಿಧದ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿರುವರು

ನಾನೇ ಏನ್, ಸುಮಲತಾ ಸುಳ್ಳು ಹೇಳುತ್ತಿದ್ದಾರೆ: ಕುಮಾರಸ್ವಾಮಿ

ಮಂಡ್ಯ: ಸಂಸದೆ ಸುಮಲತಾ ಅವರ ಮನೆಗೆ ಖುದ್ದು ನಾನೇ ಹೋಗಿ ಚುನಾವಣೆಯಲ್ಲಿ ಸಹಕರಿಸುವಂತೆ ಮನವಿ ಮಾಡಿದ್ದೆ. ಅದಕ್ಕಿಂತ ಹೆಚ್ಚು ಇನ್ನೇನು ಮಾಡಲು ಸಾಧ್ಯ ಎನ್ನುವ ಮೂಲಕ ಸುಮಲತಾ ಸುಳ್ಳು ಹೇಳುತ್ತಿದ್ದಾರೆ ಎಂದು ಮಂಡ್ಯ ಎನ್‌ಡಿಎ ಅಭ್ಯರ್ಥಿ ಹೆಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ

ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರ ಸ್ವಾಮಿ , ಜೆಡಿಎಸ್‌ನವರು ನನ್ನನ್ನು ಪ್ರಚಾರಕ್ಕೆ ಕರೆದಿಲ್ಲ ಎಂಬ ಸುಮಲತಾ ಹೇಳಿಕೆ ಸರಿಯಲ್ಲ ಎಂದಿದ್ದಾರೆ.

ಅಂಬರೀಶ್ ಅಭಿಮಾನಿಗಳು ಒಳಗೊಂಡಂತೆ ನನಗೆ ಎಲ್ಲರೂ ಸಹಾಯ ಮಾಡಿದ್ದಾರೆ. ಮೋದಿ ಕಾರ್ಯಕ್ರಮದ ವೇದಿಕೆಯಲ್ಲಿ ಸಾಧ್ಯವಾದರೆ ಎರಡು ದಿನ ಪ್ರಚಾರಕ್ಕೆ ಬನ್ನಿ ಅಕ್ಕ ಎಂದಿದ್ದೆ. ನಾನು ಸುಮಲತಾ ಅವರನ್ನು ಕರೆದಾಗ ವಿಪಕ್ಷ ನಾಯಕ ಅಶೋಕ್ ಕೂಡ ಮಂಡ್ಯಕ್ಕೆ ಬಂದು ಪ್ರಚಾರ ಮಾಡಿ ಎಂದು ಆಹ್ವಾನಿಸಿದ್ದರೆಂದು ತಿಳಿಸಿದರು.

ಸುಮಲತಾ ಇಂದು ನನಗೆ ಮತ ಕೊಟ್ಟಿದ್ದು, ಗೊಂದಲಗಳಿಗೆ ಯಾರೂ ಪ್ರಚಾರ ಕೊಡುವುದು ಬೇಡ. ನಾನೇ ಏನ್. ಯಾರು ಯಾರ ಬಗ್ಗೆಯೂ ಸಣ್ಣತನದಲ್ಲಿ ಮಾತನಾಡುವುದು ಬೇಡ. ಎಲ್ಲರೂ ಒಟ್ಟಾಗಿ ಕೆಲಸ ಮಾಡುವುದರಿಂದ ರಾಜ್ಯದಲ್ಲಿ ಎನ್‌ಡಿಎ ಹೆಚ್ಚು ಸ್ಥಾನ ಗೆಲ್ಲಲಿದೆ ಎಂದರು.

ಸಂಸದ ವಿ. ಶ್ರೀನಿವಾಸ ಪ್ರಸಾದ್ ಸ್ಥಿತಿ ಗಂಭೀರ, ಮಣಿಪಾಲ್ ಆಸ್ಪತ್ರೆಯ ಐಸಿಯುನಲ್ಲಿ ಚಿಕಿತ್ಸೆ

ಬೆಂಗಳೂರು: ರಾಜ್ಯದ ಹಿರಿಯ ರಾಜಕಾರಣಿ, ಚಾಮರಾಜನಗರ ಲೋಕಸಭಾ ಕ್ಷೇತ್ರದ ಹಾಲಿ ಸಂಸದ ವಿ ಶ್ರೀನಿವಾಸ್ ಪ್ರಸಾದ್ ತೀವ್ರ ಅನಾರೋಗ್ಯಗೊಂಡಿದ್ದಾರೆ. 76 ವರ್ಷದ ವಿ. ಶ್ರೀನಿವಾಸ್ ಪ್ರಸಾದ್ ಬಹು ಅಂಗಾಂಗ ವೈಫಲ್ಯದಿಂದ ಬಳಲುತ್ತಿದ್ದಾರೆ. ಇದೀಗ ಅವರ ಆರೋಗ್ಯದಲ್ಲಿ ತೀವ್ರ ಏರುಪೇರಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ಶ್ರೀನಿವಾಸ್ ಪ್ರಸಾದ್‌ರನ್ನು ದಾಖಲಿಸಲಾಗಿದ್ದು, ಸದ್ಯ ಅವರ ಸ್ಥಿತಿ ಗಂಭೀರವಾಗಿದೆ ಅಂತ ಹೇಳಲಾಗುತ್ತಿದೆ.

ಮೂರು ಜನ ಆರೋಪಿಗಳು ಗಡಿಪಾರು : ಜಿಲ್ಲಾಧಿಕಾರಿ ಆದೇಶ

ರಾಮನಗರ: ರಾಮನಗರ ಜಿಲ್ಲೆಯಲ್ಲಿ ಸ್ಥಳೀಯವಾಗಿ ಮಾರಕಾಸ್ತ್ರಗಳನ್ನು ಹಿಡಿದು ಆರೋಪಿಗಳು ತನ್ನ ಸಹಚರರೊಂದಿಗೆ ಸೇರಿ ಅಕ್ರಮ ಕೂಟ ಕಟ್ಟಿಕೊಂಡು ದೊಂಬಿ ಗಲಾಟೆ ಸೇರಿದಂತೆ ಸಮಾಜಘಾತುಕ ಚಟುವಟಿಕೆಗಳಲ್ಲಿ ನಿರತರಾಗಿದ್ದು, ಇವರು ಅಕ್ರಮ ಚಟುವಟಿಕೆಗಳನ್ನು ಮಾಡದಂತೆ ನಿಯಂತ್ರಿಸಲು ಕರ್ನಾಟಕ ಪೊಲೀಸ್ ಅಧಿನಿಯಮ-1963 ಕಲಂ 55ರ (ಎ)(ಬಿ) ರಡ